www.janavaadi.in

# ಜನವಾದಿ

ಸಂಪಾದಕ : ಬಸವರಾಜ ಹೆಚ್
Editor : Basavaraj H

ಜನರ ಅಂತರಂಗದ ಧ್ವನಿ
ಕನ್ನಡ ದಿನಪತ್ರಿಕೆ

JANAVAADI
Kannada Daily News Paper

ರಾಯಚೂರು
ಕಲಬುರಗಿ
ಯಾದಗಿರಿ
ಕೊಪ್ಪಳ
ಬಳ್ಳಾರಿ
ಬೀದರ್

ಸಂಪುಟ : 11 ಸಂಚಿಕೆ : 306 ಪುಟ:4 ರಾಯಚೂರು ಸೋಮವಾರ 23–06–2025 RNI NO.KARKAN/2012/56428 ಮೊಬೈಲ್: 9448300139,9449711232. e-mail : janavaadi@gmail.com ಬೆಲೆ : 2 ರೂ.
VOLUME : 11 ISSUE : 306 PAGES : 4 RAICHUR MONDAY 23-06-2025 RNI NO.KARKAN/2012/56428 MOBILE:9448300139,9449711232. E-MAIL:janavaadi@gmail.com PRICE : 2 RS.

## ಸಚಿವರಿಗೆ ಶುಭ ಕೋರಿದ ಹೂಲಗೇರಿ

ಜನವಾದಿ ವಾರ್ತೆ



ಮುದಗಲ್ ಜೂ 22– ಸಣ್ಣ ನೀರಾವರಿ ಇಲಾಖೆ ಸಚಿವ ಎನ್, ಎಸ್, ಬೋಸರಾಜ ರವರ ಹುಟ್ಟು ಹಬ್ಬದ ನಿಮಿತ್ಯ ಲಿಂಗಸುಗೂರು ಮಾಜಿ ಶಾಸಕ ಹೂಲಗೇರಿ ರವರು ಹೂ ಮಾಲೆ ಹಾಕಿ ಸನ್ಮಾನ ಮಾಡಿ ಶುಭಾಶಯಗಳು ಕೋರಿದರು.

ಈ ಸಂದರ್ಭದಲ್ಲಿ ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಗೋವಿಂದ ನಾಯಕ, ಮುದಗಲ್ ಬ್ಲಾಕ್ ಕಾಂಗ್ರೆಸ್ ಶಿವಶಂಕರಗೌಡ ಗೌಡರ,ಬಸವರಾಜ ಜೆಲ್ಲಿ ಸೇರಿದಂತೆ ಮುಂತಾದವರು ಇದ್ದರು

### ರಾಯಚೂರು ಪೇಟೆ ದರ

**ಸಣ್ಣ ಭತ್ತ(ಸೋನಾ)**
ಕನಿಷ್ಠ : 1811
ಗರಿಷ್ಠ : 2323

**ಒಣಕಡಲೆ**
ಕನಿಷ್ಠ : 5725
ಗರಿಷ್ಠ : 5811

**ಕೆಂಪು ತೊಗರಿ**
ಕನಿಷ್ಠ : 6700
ಗರಿಷ್ಠ : 6906

**ಶೇಂಗಾ (ಗುಂಗ್ರು)**
ಕನಿಷ್ಠ : 3489
ಗರಿಷ್ಠ : 5069

**ಸೂರ್ಯಕಾಂತಿ**
ಕನಿಷ್ಠ : –
ಗರಿಷ್ಠ : –

**ಈರುಳ್ಳಿ**
ಕನಿಷ್ಠ : –
ಗರಿಷ್ಠ : –

### ರಾಯಚೂರು ಜಿಲ್ಲೆ

ಇಂದಿನ ಹವಾಮಾನ ಮುನ್ಸೂಚನೆ

ಗರಿಷ್ಠ : 33 ಸೆಲ್ಸಿಯಸ್
ಕನಿಷ್ಟ : 25 ಸೆಲ್ಸಿಯಸ್

## ರಾಜ್ಯ ಸರ್ಕಾರವೇ ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುತ್ತಿದೆ, ಬಿ. ಆರ್ ಪಾಟೀಲ್ ಸತ್ಯವನ್ನೇ ಹೇಳಿದ್ದಾರೆ : ಬಿ ವೈ ವಿಜಯೇಂದ್ರ



ನೆಲಮಂಗಲ (ಬೆಂಗಳೂರು ಗ್ರಾಮಾಂತರ) ಜೂ 22– ರಾಜ್ಯ ಸರ್ಕಾರವೇ ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುತ್ತಿದೆ. ಈ ಎಲ್ಲವೂ ಬಿ. ಆರ್ ಪಾಟೀಲ್ ಹೇಳಿಕೆಯಿಂದ ಗೊತ್ತಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ನೆಲಮಂಗಲದಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರಾದ ಬಿ. ಆರ್. ಪಾಟೀಲ್ ಗಂಭೀರವಾದ ರಾಜ್ಯದ ಪರಿಸ್ಥಿತಿಯ ಬಗ್ಗೆ ಬೆಳಕು ಚೆಲ್ಲಿದ್ದಾರೆ. ಯಾವ ಇಲಾಖೆ ಬಡವರಿಗೆ ಮನೆಗಳನ್ನು ಕೊಡಬೇಕಿತ್ತೋ, ಅಲ್ಲಿಯೂ ಸಹ ಭ್ರಷ್ಟಾಚಾರ ನಡೆಯುತ್ತಿದೆ ಎಂಬುದನ್ನು ಇಂದು ರಾಜ್ಯದ ಜನತೆ ಮುಂದೆ ಬಿಚ್ಚಿಟ್ಟಿದ್ದಾರೆ ಎಂದು ಹೇಳಿದ್ದಾರೆ.

ಹಿರಿಯ ನಾಯಕರಾದ ಬಿ. ಆರ್ ಪಾಟೀಲ್ ಅವರನ್ನ ಆಡಳಿತ ಪಕ್ಷದ ನಾಯಕರು ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಈ ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಬಡವರಿಗೆ, ರೈತ–ರಿಗೆ ಶಾಪವಾಗಿ ಪರಿಣಮಿಸಿದೆ. ಕಾಂಗ್ರೆಸ್ ಸರ್ಕಾರ, ಸಿದ್ದರಾಮಯ್ಯ ಸರ್ಕಾರದಿಂದ ಬಡವರಿಗೆ ಯಾವುದೇ ಅನುಕೂಲ ಇಲ್ಲ ಎಂದು ತಿಳಿಸಿದ್ದಾರೆ.

ಹಿಂದೆ ಯಡಿಯೂರಪ್ಪನವರ ಸರ್ಕಾರ ಇದ್ದಾಗ ಅನೇಕ ಬಡವರ ಪರ ಯೋಜನೆ ನೀಡಿದ್ರು. ಎಲ್ಲಾ ಯೋಜನೆ ಮರೆತಿದ್ದಾರೆ. ಭ್ರಷ್ಟಾಚಾರ, ಭ್ರಷ್ಟಾಚಾರ, ಭ್ರಷ್ಟಾಚಾರ ಬಿಟ್ರೆ ಈ ಸರ್ಕಾರದಲ್ಲಿ ಯಾವುದೇ ಯೋಜನೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.

ಎಲ್ಲೊ ಒಂದು ಕಡೆ ಸ್ಟೇಟ್ ಸ್ಪಾನ್ಸರ್ ಕರೆಪ್ಷನ್, ರಾಜ್ಯ ಸರ್ಕಾರವೇ ಇವತ್ತು ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುತ್ತಿದೆ. ಈ ಎಲ್ಲವೂ ಬಿ. ಆರ್ ಪಾಟೀಲ್ ಹೇಳಿಕೆಯಿಂದ ಗೊತ್ತಾಗುತ್ತಿದೆ. ನಾವು ಕೂಡ ಬಿಜೆಪಿಯಿಂದ ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದು ವಿಜಯೇಂದ್ರ ಹೇಳಿದರು.

ಬಿಆರ್ ಪಾಟೀಲ್ ಹೇಳಿದ್ದೇನು? ವಸತಿ ಹಂಚಿಕೆಯಲ್ಲಿ ಲಂಚ ಆರೋಪಕ್ಕೆ ಸಂಬಂಧಪಟ್ಟಂತೆ ಆಡಿಯೋ ಸಂಭಾಷಣೆ ಬಗ್ಗೆ ಶನಿವಾರ (ಜೂನ್ 21) ಬೆಂಗಳೂ–ರಿನಲ್ಲಿ ಪ್ರತಿಕ್ರಿಯಿಸಿದ್ದ ಶಾಸಕ ಬಿ ಆರ್ ಪಾಟೀಲ್, ಅದು ನಾನೇ ಮಾತನಾಡಿದ ಆಡಿಯೋ. ಎಲ್ಲ ಸರ್ಕಾರಗಳಲ್ಲೂ ಭ್ರಷ್ಟಾಚಾರ ನಡೆದಿತ್ತು. ನಾವು ಜನಪರ ಆಡಳಿತ ಕೊಡುತ್ತೇವೆ ಎಂದು ರಾಜ್ಯದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದಿದ್ದು. ಆದರೆ ಹೀಗೆ ಆಗಬಾರದಿತ್ತು ಎಂದು ಬೇಸರ ವ್ಯಕ್ತಪಡಿಸಿದ್ದರು.

5–6 ಪಂಚಾಯಿತಿಗಳಲ್ಲಿ ಜನರು ದುಡ್ಡು ಕೊಟ್ಟು ಮನೆಗಳನ್ನು ತೆಗೆದುಕೊಂಡಿದ್ದಾರೆ. ನಾನು ಕೊಟ್ಟ ಪತ್ರಕ್ಕೆ ಮನೆಗಳು ಹಂಚಿಕೆ ಆಗಿಲ್ಲ. ನಾನು 4 ಪತ್ರಗಳನ್ನು ಕೊಟ್ಟಿದ್ದೆ. ನನ್ನ ಕ್ಷೇತ್ರಕ್ಕೆ ಮನೆಗಳನ್ನು ಕೊಡಿ ಅಂತಾ ಪತ್ರ ಬರೆದರೂ ಕೊಟ್ಟಿರಲಿಲ್ಲ. ಆದ್ರೆ ಪಂಚಾಯಿತಿ ಅಧ್ಯಕ್ಷರು ನನ್ನ ಪತ್ರಗಳನ್ನೇ ಕೊಟ್ಟು ಮನೆಗಳನ್ನು ತಂದಿದ್ದಾರೆ. ಸಿಎಂ ಕರೆದು ಮಾಹಿತಿ ಕೇಳಿದರೆ ಹೋಗಿ ಮಾಹಿತಿ ಕೊಡುವೆ ಎಂದು ಹೇಳಿದ್ದರು.

## ನಾಡದೊರೆ ಸ್ವಾಗತಕ್ಕೆ ಅದ್ಧೂರಿ ವೇದಿಕೆ ಸಿದ್ಧತೆ

## 936 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳ ಉದ್ಘಾಟನೆ –ಬಸನಗೌಡ ದದ್ದಲ್

ಜನವಾದಿ ವಾರ್ತೆ



ರಾಯಚೂರು ಜೂ 22– ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾ–ರಿಗಳಿಗೆ ಶಂಕುಸ್ಥಾಪನೆ ಬುಡಕಟ್ಟು ಸಾಂಸ್ಕೃತಿಕ ಉತ್ಸವ, 371 ಜೆ ಕಲಂ ದಶಮಾನೋತ್ಸವ ಕಾರ್ಯಕ್ರಮ, ರಾಯಚೂರು ವಿ.ವಿಗೆ ಆದ–'ಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವೆಂದು ನಾಮಕರಣ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಇಂದು ಮುಖ್ಯಮಂತ್ರಿಗಳು ಚಾಲನೆ ನೀಡಲಿರುವ ವೇದಿಕೆಯು ಯರಗೇರಾ ಗ್ರಾಮದಲ್ಲಿ ಅದ್ಧೂ–ರಿಯಾಗಿ ಸಿದ್ಧವಾಗಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು, ರಾಯಚೂರ ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ ಅವರೊಂದಿಗೆ ಜೂನ್ 22ರಂದು ಯರಗೇರಾ ಗ್ರಾಮದ ಬಳಿಯಲ್ಲಿ ಸಿದ್ದವಾದ ವೇದಿಕೆಯ ಸ್ಥಳಕ್ಕೆ ಆಗಮಿಸಿ ಅಂತಿಮ ಹಂತದ ಸಿದ್ಧತೆಯನ್ನು ಪರಿಶೀಲಿಸಿ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ರಾಯಚೂರ ಜಿಲ್ಲೆಗೆ ಮಾನ್ಯ ಮುಖ್ಯಮಂತ್ರಿಗಳ ಪ್ರವಾಸ ಕಾರ್ಯಕ್ರಮ ನಿಗದಿಯಾದ ದಿನದಿಂದ ತಾವು ಹತ್ತಾರು ಭಾರಿ ಯರಗೇರಾ ಗ್ರಾಮಕ್ಕೆ ಮತ್ತು ವಿಶ್ವವಿದ್ಯಾಲಯದ ಆವರಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರಿಂದಾಗಿ, ಜಿಲ್ಲಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪರಿಶೀಲನೆ ನಡೆಸಿದ್ದರಿಂದಾಗಿ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳ ಸಿದ್ಧತೆಯು ಅಚ್ಚುಕಟ್ಟಾಗಿ ನಡೆದು ಇದೀಗ ಉದ್ಘಾಟನೆಗೆ ಕ್ಷಣಗಣನೆ ಆರಂಭವಾಗಿದೆ ಎಂದು ಶಾಸಕರು ತಿಳಿಸಿದರು.

ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿಯೇ ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಿ ಇತಿಹಾಸದ ಪುಟ ಸೇರ್ಪಡೆಯಾಗುವ ಹಾಗೆ ಕಾರ್ಯಕ್ರಮವು ಸಿದ್ಧವಾಗಿದೆ. ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ರಾಜ್ಯಸಭೆಯ ಸದಸ್ಯರು ಹಾಗೂ ವಿರೋಧ ಪಕ್ಷದ ನಾಯಕರಾದ ಡಾ.ಮಲ್ಲಿಕಾರ್ಜುನ ಎಂ.ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಗೌರವ ಉಪಸ್ಥಿತಿ ವಹಿಸುವರು. ಅದೇ ರೀತಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸಚಿವರು, ರಾಯಚೂರ ಸೇರಿದಂತೆ ಸುತ್ತಲಿನ ವಿವಿಧ ಜಿಲ್ಲೆಗಳ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರು ಸೇರಿದಂತೆ ಯರಗೇರಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಎಲ್ಲ ಸದಸ್ಯರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ಉಮಾ ಮಹಾದೇವನ್ ಸೇರಿದಂತೆ ವಿವಿಧ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಸರಕಾರದ ಪ್ರಧಾನ ಕಾರ್ಯದರ್ಶಿಗಳು, ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು,

☛4



# ನೇಮಕಾತಿಯಲ್ಲಿ ಅವ್ಯವಹಾರ : ಸೂಕ್ತ ಕ್ರಮಕ್ಕೆ ಆಗ್ರಹ

ಜನವಾದಿ ವಾರ್ತೆ

ರಾಯಚೂರು ಜೂ 22 – ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಸಿಬ್ಬಂದಿಗಳ ನೇಮಕಾತಿಯಲ್ಲಿ ಅವ್ಯವಹಾರ ನಡೆದಿದ್ದು ಆಡಳಿತ ಮಂಡಳಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಯುವ ಜಾಗೃತಿ ವೇದಿಕೆ ಮುಖಂಡ ಚನ್ನಬಸವ ಅರೋಲಿ ಆಗ್ರಹಿಸಿದರು.



ಅವರಿಂದು ನಗರದ ಪತ್ರಿಕಾ ಭವನದಲ್ಲಿಂದು ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದವರು ವಿಶ್ವವಿದ್ಯಾಲಯದ ಅಧೀನದಲ್ಲಿ ಬೋಧನೆ ವಿಭಾಗ ಒಂದನ್ನು ಹೊರತುಪಡಿಸಿ ಇನ್ನಿತರೆ ಎಲ್ಲಾ ವಿಭಾಗಗಳಲ್ಲಿ ಸಿಬ್ಬಂದಿಗಳ ನೇಮಕಾತಿ ವಿಷಯದಲ್ಲಿ ಭಾರೀ ಅವ್ಯವಹಾರ ನಡೆದಿದೆ ಎಂದು ಆರೋಪಿಸಿದ ಅವರು, ಇತ್ತೀಚೆಗೆ ಸಿ.ಎಸ್ ಪಾಸೋಡಿ ಪ್ರೊಡಕ್ಷನ್ ಮತ್ತು ಮ್ಯಾನುಫ್ಯಾಕ್ಚ-ರಿಂಗ್ (ಓಪಿಸಿ) ಪ್ರೈ.ಲಿ ಹಾಗೂ ಕಲಬುರಗಿ ಮೂಲದ ಕಿಯೋನಿಕ್ಸ್ ಎಂಬ ಸಂಸ್ಥೆಯವರಿಗೆ ಸಿಬ್ಬಂದಿಗಳ ನೇಮಕಾತಿ ಮಾಡಿಕೊಳ್ಳಲು ಟೆಂಡರ್ ನೀಡಿದ್ದಾರೆ ಅದರಂತೆಯೇ ಈ ಸಂಸ್ಥೆಯವರು ಸರಿಸುಮಾರು 150ಕ್ಕೂ ಅಧಿಕ ನಿರುದ್ಯೋಗಿ ಯುವಕ, ಯುವತಿಯರಿಗೆ ಗಾಳ ಹಾಕಿ ಅವರಿಗೆ ಉದ್ಯೋಗ ನೀಡುವುದಾಗಿ ನಂಬಿಸಿ ಪ್ರತಿಯೊಬ್ಬರಿಂದ ಕನಿಷ್ಠ 2 ಲಕ್ಷ ದಿಂದ 4 ಲಕ್ಷದವರೆಗೆ ಹಣವನ್ನು ಪಡೆದುಕೊಂಡಿದ್ದಾರೆ ಎಂದು ಆರೋಪಿಸಿದರು.

ಉದ್ಯೋಗ ಸಿಗುತ್ತದೆ ಎಂಬ ಭ್ರಮೆಯಿಂದ ಅನೇಕ ನಿರುದ್ಯೋಗಿ ಯುವಕ,ಯುವತಿಯರು ಇವರ ಮಾತುಗಳಿಗೆ ಮರುಳಾಗಿ ಹಣವನ್ನು ನೀಡಿ ಉದ್ಯೋಗವನ್ನು ಸಹ ಪಡೆದುಕೊಂಡಿದ್ದಾರೆ. ಆದರೆ, ಹಣ ನೀಡಿ ಉದ್ಯೋಗ ಪಡೆದುಕೊಂಡಿರುವ ಅಭ್ಯರ್ಥಿಗಳಿಗೆ ಸಂದರ್ಶನದಲ್ಲಿ ಸೂಚಿಸಿದ ಹುದ್ದೆಯನ್ನು ಬಿಟ್ಟು ಬೇರೆ ಬೇರೆ ಹುದ್ದೆಗಳನ್ನು ನೀಡಿದ್ದಾರೆ ಹಾಗೂ ಉದ್ಯೋಗ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ಈ ಅಭ್ಯರ್ಥಿಗಳಿಗೆ ಕಳೆದ 6–8 ತಿಂಗಳುಗಳವರೆಗೆ ವೇತನವನ್ನು ಕೂಡ ನೀಡದೇ ವೇತನ ಬಾಕಿಯಿರಿಸಿಕೊಂಡಿದ್ದಾರೆ. ಕೂಡಲೇ ಎಲ್ಲ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಿ, ದಾಖಲೆಗಳನ್ನು ಆಧರಿಸಿ ವಿಶ್ವವಿದ್ಯಾಲಯದ ಸಿಬ್ಬಂದಿ ನೇಮಕಾತಿ ವಿಷಯದಲ್ಲಿ ಅವ್ಯವಹಾರದಲ್ಲಿ ತೊಡಗಿಕೊಂಡಿರುವ ಏಜೆನ್ಸಿಯವರನ್ನು ಕಪ್ಪುಪಟ್ಟಿಗೆ ಸೇರಿಸಬೇಕು ಹಾಗೂ ನೊಂದ ಅಭ್ಯರ್ಥಿಗಳಿಂದ ಪಡೆದುಕೊಂಡಿರುವ ಹಣವನ್ನು ಮರಳಿ ಅವರಿಗೆ ಮರಳಿ ನೀಡಬೇಕು ಹಾಗೂ ಈ ಅವ್ಯವಹಾರದಲ್ಲಿ ಏಜೆನ್ಸಿಯವರೊಂದಿಗೆ ಶಾಮೀಲಾಗಿರುವ ವಿಶ್ವವಿದ್ಯಾಲಯದ ಆಡಳಿತ ವರ್ಗದ ಸಿಬ್ಬಂದಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಅವರನ್ನು ಕರ್ತವ್ಯದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಾಬು, ರುಕ್ಕುದ್ದಿನ್, ಮಂಜುನಾಥ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಕ್ಕಳನ್ನು ಮನುಷ್ಯನನ್ನಾಗಿ ಮಾಡುವವನೇ ತಂದೆ – ಕಾಡ್ಲೂರು

ಜನವಾದಿ ವಾರ್ತೆ

ಲಿಂಗಸೂಗೂರು ಜೂ 22– ಮಕ್ಕಳನ್ನು ಮನುಷ್ಯನನ್ನಾಗಿ ಮಾಡುವವನೇ ನಿಜವಾದ ತಂದೆ ಎಂದು ಸಾಹಿತಿ ಡಾ.ಶಶಿಕಾಂತ ಕಾಡ್ಲೂರು ಅಭಿಪ್ರಾಯಪಟ್ಟರು.




ಪಟ್ಟಣದ ಲೂರ್ದು ಮಾತೆ ಚರ್ಚ್ ನಲ್ಲಿ ಹಮ್ಮಿಕೊಂಡಿದ್ದ ಅಪ್ಪಂದಿರ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು,ತಂದೆ ಮನೆಯ ಜವಾಬ್ದಾರಿಗಳನ್ನು ಹೆಗಲ ಮೇಲೆ ಹೊತ್ತು, ಮನೆಯ ಒಳಗೂ, ಹೊರಗೂ ಮನೆಯವರ ಸುರಕ್ಷತೆಗಾಗಿ ಸದಾ ಸಿದ್ಧ. ಎರಡೂ ಕೈ ಸೇ-ರಿದರೆ ಚಪ್ಪಾಳೆ ಎನ್ನುವ ಹಾಗೇ ಮನೆ, ಸಂಸಾರ ಸಾಗಬೇಕೆಂದಾಗ ತಾಯಿ ಎಷ್ಟು ಮುಖ್ಯವಾಗುತ್ತಾಳ್ಳೋ ತಂದೆಯೂ ಅಷ್ಟೇ ಮುಖ್ಯ. ಮನೆಯ ಒಳಿತಿಗಾಗಿ ಸದಾ ಶ್ರಮಿಸುವವರು ಇವರು.

ತಾಯಿ ಅಂತ ಬಂದಾಗ ಆಕೆಯೊಂದಿಗೆ ಭಾವನಾತ್ಮಕ ವಾಗಿ ಬೆರೆಯುತ್ತೇವೆ. ತಾಯಿಯ ಪ್ರತಿಯೊಂದು ಮಾತಿಗೂ ಒಲ್ಲೆ ಎನ್ನಲಾಗದು. ಸುಖ, ದುಃಖ, ಖುಷಿ ಎಲ್ಲವನ್ನೂ ತಾಯಿಯೊಂದಿಗೆ ಮುಕ್ತವಾಗಿ ಹಂಚಿಕೊಳ್ಳುತ್ತೇವೆ . ಆದರೆ ಬೆಳೆಯುತ್ತಿರುವ ವಯಸ್ಸಿನಲ್ಲಿ ತಾಯಿಯೊಂದಿಗೆ ಇರುವಷ್ಟು ಒಡನಾಟ ಅಪ್ಪನ ಬಳಿ ಕಡಿಮೆ. ತಂದೆಯೆಂದರೆ ಅದೇನೋ ಭಯ ಚಿಕ್ಕಂದಿನಿಂದಲೂ ನಮ್ಮಲ್ಲಿ ಬೆಳೆದು ಬಂದಿರುತ್ತದೆ .

ಹರೆಯದ ವಯಸ್ಸಿನಲ್ಲಿ ಮಕ್ಕಳಿಗೆ ತಂದೆ ಹಿಟ್ಲರ್‌ನಂತೆ ಕಾಣಿಸುತ್ತಾರೆ. ರಕ್ತ ಕುದಿಯುವ ಆ ವಯಸ್ಸಿನಲ್ಲಿ ತಂದೆಯನ್ನು ಎದುರು ಹಾಕಿಕೊಳ್ಳುವ ಭಂಡ ಧೈರ್ಯ ತೋರಿಸುತ್ತೇವೆ. ವಯಸ್ಸು ಚಿಗುರೊಡೆಯುವ ಆ ಸಮಯಲ್ಲಿ ತಂದೆಗೆ ಎದುರು ಮಾತಾಡಿ ನಮ್ಮ ವಾದವನ್ನು ಗೆದ್ದರೆ ಯುದ್ಧ ಗೆದ್ದ ಹಾಗೆ. ಆದರೆ ಪ್ರತಿಯೊಬ್ಬ ಮಗನು ತಂದೆಯಂತಾಗಲು ಪ್ರಯತ್ನಿಸುತ್ತಾನೆ. ಮಗನಿಗೆ ತಂದೆ ಆದರ್ಶವಾಗುತ್ತಾನೆ ಎಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯವನ್ನು ವಂ.ಫಾ.ಜೋಸ್ ಪ್ರಕಾಶ, ಕಾನ್ವೆಂಟ್ ಮುಖ್ಯಸ್ಥರಾದ ಸಿಸ್ಟರ್ ಕೀರ್ತಾನ್, ಸಿಸ್ಟರ್ ಶಾಂತಿ ಲವೀನಾ, ಪಾಲನಾ ಸಮಿತಿ ಕಾರ್ಯದರ್ಶಿ ಅಮರೇಶ ಘಂಟಿ, ಮೇಷಕ್, ಮಾರ್ಟಿನ್, ಶಾಂತಪ್ಪ, ಪ್ರಾನ್ಸಿಸ್ ಕುಮಾರ್, ವಿಶ್ವಾಸಪ್ಪ, ತೇರೆಸಾ ಮೇಷಕ್, ಮೇರಿ, ಕಮಲಾಕ್ಷಿ, ತೇರೆಸಾ ಬಸ್ಸಾನಿ, ಸುಶೀಲಮ್ಮ ಸೇರಿ ಭಕ್ತರು ಹಾಗೂ ಮಕ್ಕಳು ಇದ್ದರು.

# ಒತ್ತಡರಹಿತ ಜೀವನಕ್ಕೆ ಯೋಗ ಸಹಕಾರಿ – ಶಿವರಾಜ .ವಿ .ಸಿದ್ದೇಶ್ವರ



ಜನವಾದಿ ವಾರ್ತೆ

ಮಾನ್ವಿ ಜೂ 22– ಪಟ್ಟಣದ ಸಿವೀಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ಆವರಣದಲ್ಲಿ ನಡೆದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಹಿರಿಯ ನ್ಯಾಯಾಧೀಶರಾದ ಶಿವರಾಜ .ವಿ .ಸಿದ್ದೇಶ್ವರ ಉದ್ಘಾಟಿಸಿ ಮಾತನಾಡಿ ಪ್ರತಿದಿನ ಸ್ವಲ್ಪ ಸಮಯ ಯೋಗ ಅಭ್ಯಾಸ ಮಾಡುವುದರಿಂದ ದೇಹ ಮತ್ತು ಮನಸ್ಸನ್ನು ಒಂದುಗೂಡಿಸಬಹುದಾಗಿದೆ, ಯೋಗವು ಉತ್ತಮ ಆರೋಗ್ಯ ಮತ್ತು ಯೋಗಕ್ಷೇಮವನ್ನು ನೀಡುವುದರೊಂದಿಗೆ ಆರೋಗ್ಯಕರ ಜೀವನವನ್ನು ನೀಡುತ್ತದೆ. ಯೋಗದಿಂದ ನಿತ್ಯ ಜೀವನದಲ್ಲಿ ಸಮತೋಲನ ಕೌಶಲ್ಯ ಬೆಳೆಯುತ್ತದೆ ದೈಹಿಕ ನಿಷ್ಕ್ರಿಯತೆಯನ್ನು ಕಡಿಮೆ ಮಾಡಿ ಒತ್ತಡರಹಿತ ಜೀವನವನ್ನು ನಡೆಸಬಹುದಾಗಿದೆ. ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿ ಆಗುತ್ತದೆ. ಯೋಗ ನಮ್ಮೆಲ್ಲರ ಬದುಕಿನ ಭಾಗವಾಗಲಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಿರಿಯ ಶ್ರೇಣಿ ನ್ಯಾಯಾಲಾಯದ ನ್ಯಾಯಾಧೀಶರಾದ ಆನಂದ ಎಚ್ ಕೊಣ್ಣೂರ, ತಾ.ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್, ಪ್ರ. ಕಾರ್ಯದರ್ಶಿ ಚನ್ನಬಸವ ನಾಯಕ ಬಲ್ಲಟಗಿ, ಉಪಾಧ್ಯಕ್ಷರಾದ ಮನೋಹರ ವಿಶ್ವಕರ್ಮ, ಖಜಾಂಚಿ ದತ್ತಾತ್ರೇಯ ಕೊಟ್ನೇಕಲ್, ಜಂಟಿ ಕಾರ್ಯದರ್ಶಿ ಈಶಪ್ಪ ಬೈಲ್ ಮರ್ಚೇಡ್, ಹಿರಿಯ ವಕೀಲರಾದ ಗುಮ್ಮಾ ಬಸವರಾಜ, ಎಂ.ವೀರನಗೌಡ,ಡಿ. ರವಿಕುಮಾರ,ಚಂದ್ರಶೇಖರ ರಾಥೋಡ್, ಸೇರಿದಂತೆ ನ್ಯಾಯಾಲಯದ ಸಿಬ್ಬಂದಿಗಳು, ಸೇರಿದಂತೆ ಇತರರು ಇದ್ದರು.

# ರಾಯಚೂರ ಜಿಲ್ಲೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಪ್ರವಾಸ

ಜನವಾದಿ ವಾರ್ತೆ

ರಾಯಚೂರು ಜೂ 22 – ಕರ್ನಾಟಕ ಸರ್ಕಾರದ ಮಾನ್ಯ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ಜೂನ್ 23 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅವರು ಜೂನ್ 23ರ ಬೆಳಿಗ್ಗೆ 10.30ಕ್ಕೆ ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣದಿಂದ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರೊಂದಿಗೆ ವಿಶೇಷ ವಿಮಾನದ ಮೂಲಕ ಹೊರಟು ಬೆಳಿಗ್ಗೆ 11.10ಕ್ಕೆ ಆಂದ್ರಪ್ರದೇಶದ ಕರ್ನೂಲ್ ಜಿಲ್ಲೆಯ ಉಯ್ಯಾಲವಾಡ ನರಸಿಂಹ ರೆಡ್ಡಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಅಲ್ಲಿಂದ ಬೆಳಿಗ್ಗೆ 11.15ಕ್ಕೆ ಹೆಲಿಕ್ಯಾಪ್ಟರ್ ನಿಂದ ನಿರ್ಗಮಿಸಿ, ರಾಯಚೂರ ತಾಲೂಕಿನ ಯರಗೇರಾ ಗ್ರಾಮದ ಹತ್ತಿರದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿನ ಹೆಲಿಪ್ಯಾಡ್ ಆವರಣಕ್ಕೆ ಬೆಳಗ್ಗೆ 11.35ಕ್ಕೆ ಆಗಮಿಸುವರು. ಬಳಿಕ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುವ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನ ಮತ್ತು ಕಂಚಿನ ಪುತ್ಥಳಿ ಹಾಗೂ ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಯ ಶಂಕುಸ್ಥಾಪನೆ ಸಮಾರಂಭದಲ್ಲಿ ಭಾಗಿಯಾಗುವರು. ಬಳಿಕ ರಾಯಚೂರು ತಾಲೂಕಿನ ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಹತ್ತಿರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ವತಿಯಿಂದ ನಡೆಯುವ ಬುಡಕಟ್ಟು ಸಾಂಸ್ಕೃತಿಕ ಉತ್ಸವ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಫಲಕ ಅನಾವರಣ ಹಾಗೂ 371(ಜೆ) ದಶಮಾನೋತ್ಸವ ಮತ್ತು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ಸಮಾರಂಭದಲ್ಲಿ ಭಾಗಿಯಾಗುವರು.

ಬಳಿಕ ಸಂಜೆ 4 ಗಂಟೆಗೆ ರಾಯಚೂರ ತಾಲೂಕಿನ ಯರಗೇರಾ ಗ್ರಾಮದ ಹತ್ತಿರದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿನ ಹೆಲಿಪ್ಯಾಡ್‌ನಿಂದ ನಿರ್ಗಮಿಸಿ 4.20ಕ್ಕೆ ಆಂದ್ರಪ್ರದೇಶದ ಕರ್ನೂಲ್ ಜಿಲ್ಲೆಯ ಉಯ್ಯಾಲವಾಡ ನರಸಿಂಹ ರೆಡ್ಡಿ ವಿಮಾನ ನಿಲ್ದಾಣಕ್ಕೆ ತೆರಳಿ ಅಲ್ಲಿಂದ ವಿಶೇಷ ವಿಮಾನದ ಮೂಲಕ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಮಾನ್ಯ ಉಪ ಮುಖ್ಯಮಂತ್ರಿಗಳ ಹೆಚ್ಚುವರಿ ಆಪ್ತ ಕಾರ್ಯದರ್ಶಿ ಬಿ.ಎಸ್.ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಪ್ರತಿದಿನ ಯೋಗ ಅಭ್ಯಾಸ ಮಾಡುವುದರಿಂದ ಉತ್ತಮ ಆರೋಗ್ಯ ಪಡೆಯಬಹುದು: ಶರಣಪ್ಪ ಮೇದಾ



ಜನವಾದಿ ವಾರ್ತೆ

ಮಾನ್ವಿ ಜೂ 22– ಪಟ್ಟಣದ ನಮಾಜಗೇರಿಗುಡ್ಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಪುರಸಭೆ ಸದಸ್ಯರಾದ ಶರಣಪ್ಪ ಮೇದಾ ಚಾಲನೆ ನೀಡಿ ಮಾತನಾಡಿ ವಿದ್ಯಾರ್ಥಿಗಳು ಶಾಲೆಯ ಶಿಕ್ಷಕರ ಮಾರ್ಗದರ್ಶನದಲ್ಲಿ ಪ್ರತಿದಿನ ಯೋಗ ಅಭ್ಯಾಸ ಮಾಡುವುದ-ರಿಂದ ಶಾರೀರಿಕವಾಗಿ ಹಾಗೂ ಮಾನಸಿಕವಾಗಿ ಸಧೃಢವಾಗಿರುವುದಕ್ಕೆ ಸಾಧ್ಯವಾಗುತ್ತದೆ ಹಾಗೂ ಕಲಿಕೆಯಲ್ಲಿ ಏಕಾಗ್ರತೆ ಹೊಂದುವುದಕ್ಕೆ ಯೋಗ ಸಹಾಯಕವಾಗಿರುತ್ತದೆ ಯೋಗವು ನಮ್ಮ ದೇಶದ ಜ್ಞಾನದ ಸಂಕೇತವಾಗಿದೆ ಎಂದು ತಿಳಿಸಿದರು.

ಶಾಲೆಯ ಆವರಣದಲ್ಲಿ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು, ಎಸ್.ಡಿ.ಎಂ. ಸಿ ಅಧ್ಯಕ್ಷರು ಮತ್ತು ನಮ್ಮ ಕ್ಲಿನಿಕ್ ಸಿಬ್ಬಂದಿಗಳು ಭಾಗವಹಿಸಿದರು.

ವಿಶ್ವ ಯೋಗ ದಿನಾಚರಣೆ ಅಂಗವಾಗಿ ಯೋಗದ ಕೆಲವು ಆಸನಗಳನ್ನು ಮಕ್ಕಳು ಅಭ್ಯಾಸ ಮಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾ.ಅಧ್ಯಕ್ಷರಾದ ಸಂಗಮೇಶ ಮುಧೋಳ, ಶಾಲಾ ಸುಧಾರಣೆ ಸಮಿತಿಯ ಅಧ್ಯಕ್ಷರಾದ ಅಶ್ವಿನಿ ಅಯ್ಯಪ್ಪ, ಶಾಲಾ ಮುಖ್ಯ ಗುರುಗಳಾದ ಲಕ್ಮೀದೇವಿ, ಶಿಕ್ಷಕರಾದ ವೀಣಾ ಜೋಶಿ, ಗಿರಿಜಾದೇವಿ, ಬಸವರಾಜ ಅಣುರ, ಆಂಜನೇಯ, ದೀಪಾ, ಲಲಿತಮ್ಮ, ನಮ್ಮ ಕ್ಲಿನಿಕ್‌ನ ಸಿಬ್ಬಂದಿಗಳಾದ ಗಂಗಾ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಮಾನವಿ: ಬಾಲಕಾರ್ಮಿಕ, ಕಿಶೋರ ಕಾರ್ಮಿಕತೆ ನಿರ್ಮೂಲನೆಯ ಆಟೋ ಪ್ರಚಾರದ ಜನಜಾಗೃತಿ

ಜನವಾದಿ ವಾರ್ತೆ

ರಾಯಚೂರು ಜೂ 20 – ಜಿಲ್ಲೆಯ ಮಾನವಿ ತಾಲೂಕಿನಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕತೆ ನಿರ್ಮೂಲನೆಯ ಆಟೋ ಪ್ರಚಾರದ ಜನಜಾಗೃತಿ ಸಂಚಾರಿ ವಾಹನಕ್ಕೆ ಜೂನ್ 19ರಂದು ಮಾನವಿಯ ಗ್ರೇಡ್–2 ತಹಶೀಲ್ದಾರ ಅಬ್ದುಲ್ ವಾಹಿದ್ ಅವರು ರಿಬ್ಬನ್ ಕತ್ತರಿಸಿ ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಮಕ್ಕಳನ್ನು ಯಾವುದೇ ಕಾರಣಕ್ಕೂ ಕೆಲಸಕ್ಕೆ ಕಳುಹಿಸದೇ ಕಡ್ಡಾಯವಾಗಿ ಶಾಲೆಗೆ ಕಳುಹಿಸಬೇಕು. ಮಕ್ಕಳು ತಮ್ಮ ಬಾಲ್ಯವನ್ನು ಶಿಕ್ಷಣ ಮತ್ತು ಆಟದ ಜೊತೆಗೆ ಕಳೆಯಬೇಕು. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳುಹಿಸುವುದು ಪೋಷಕರ ಆದ್ಯ ಕರ್ತವ್ಯವಾಗಿರುತ್ತದೆ ಎಂದು ತಿಳಿಸಿದರು.

ಈ ಸಂಚಾರಿ ಜನಜಾಗೃತಿ ವಾಹನವು ಎಸ್.ಸಿ ಮತ್ತು ಎಸ್.ಟಿ ಜನಾಂಗದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮಾನವಿ ತಾಲೂಕಿನಾದ್ಯಂತ 02 ದಿನಗಳ ಕಾಲ ಸಂಚರಿಸಲಿದೆ. ಇದೆ ವೇಳೆ ಕರಪತ್ರಗಳನ್ನು ಹಂಚುವುದರ ಮೂಲಕ ಮತ್ತು ಸ್ಟಿಕ್ಕರ್‌ಗಳನ್ನು ಅಂಟಿಸುವ ಮುಖಾಂತರ ಜನಜಾಗೃತಿ ಮೂಡಿಸಲಾಗುತ್ತಿದೆ. ಮಕ್ಕಳನ್ನು ಕೆಲಸಕ್ಕೆ ಕಳುಹಿಸದೇ ಶಾಲೆಗೆ ಕಳುಹಿಸಬೇಕು ಎಂದು ಜನರಲ್ಲಿ ತಿಳಿಸುವ ಕಾರ್ಯಕ್ರಮ ಇದಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, ಮಾನವಿಯ ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ, ಶಿಕ್ಷಣ ಇಲಾಖೆಯ ಸೋಮಶೇಖರ ಹಾಗೂ ಹಾಲೇಶ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ರಾಜಶೇಖರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಸರಿತಾ ಹಾಗೂ ಶಿವಶಂಕರ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

# ಅಪಾಯಕಾರಿ ಮರಗಳ ತೆರವಿಗೆ ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನ

ಜನವಾದಿ ವಾರ್ತೆ

ರಾಯಚೂರು ಜೂ 20 – ಜಿಲ್ಲೆಯ ಉಪ ಅರಣ್ಯ ಸಂರಕ್ಷಣಾಧಿಕಾ-ರಿಗಳ ಕಚೇರಿಯ, ಪ್ರಾದೇಶಿಕ ಅರಣ್ಯ ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರ ತಾಲೂಕಿನ ಆರ್‌ಟಿಪಿಎಸ್ ಕಾಲೋನಿಯಲ್ಲಿ ಟೈಪ್–3, ಟೈಪ್–4, ಟೈಪ್–6, ಟೈಪ್–5 ಮತ್ತು ಟೈಪ್–7, ಮನೆಗಳ ಸುತ್ತಲು ಇರುವ ಅಪಾಯಕಾರಿ ನೀಲಗಿರಿ ಹಾಗೂ ಇತರೆ ಜಾತಿಯ ಒಟ್ಟು 74 ಮರಗಳ ತೆರವಿಗೆ ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯಿದೆ 1976 ಕಲಂ 8(3)(1/11)ರ ಅಡಿಯಲ್ಲಿ ಅನುಮತಿ ನೀಡಬೇಕಾಗಿದೆ. ಇದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ತಮ್ಮ ಸಲಹೆ, ಅಭಿಪ್ರಾಯ ಮತ್ತು ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ತಾಲೂಕಿನ ಪ್ರಾದೇಶಿಕ ಅರಣ್ಯ ವಿಭಾಗದ ಕಚೇರಿಗೆ ಜೂನ್ 30ರೊಳಗಾಗಿ ಸಲ್ಲಿಸಬೇಕೆಂದು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲಾ ಕೊಠಡಿ ಉದ್ಘಾಟಿಸಿದ ಎಂ.ಎಲ್.ಸಿ ಶರಣಗೌಡ ಬಯ್ಯಾಪುರ

ಜನವಾದಿ ವಾರ್ತೆ

ಲಿಂಗಸೂಗೂರು ಜೂ 22– ಲಿಂಗಸೂಗೂರು ಕ್ಷೇತ್ರದಲ್ಲಿ ಶೈಕ್ಷಣಿಕ ಪ್ರಗತಿಗೆ ಅಗತ್ಯ ಸೌಲತ್ತುಗಳನ್ನು ಒದಗಿಸಲಾಗುತ್ತಿದೆ. ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಅನೇಕ ಕಡೆ ಮಕ್ಕಳಿಗೆ ಅಗತ್ಯದ ಸೌಲತ್ತುಗಳನ್ನು ಒದಗಿಸಲು ಶ್ರಮಿಸುವೆ ಎಂದು ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಹೇಳಿದರು.



ತಾಲೂಕಿನ' ರೋಡಲಬಂಡಾ(ಯುಕೆಪಿ) ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೆ.ಕೆಆರ್.ಡಿ.ಬಿ ಅನುದಾನದಲ್ಲಿ ನಿರ್ಮಿಸಿದ ಶಾಲಾ ಕೊಠಡಿಯನ್ನು ಹಸ್ತಾಂತರಿಸಿ ಮಾತನಾಡಿದ ಅವರು ತಾಲೂಕಿನಲ್ಲಿ ಮಕ್ಕಳಿಗೆ ಸರಿಯಾದ ಶಿಕ್ಷಣ ದೊರೆಯುವ ಜೊತೆಗೆ ಗ್ರಾಮಗಳಲ್ಲಿ ಬೆಳಕು, ರಸ್ತೆ ಸೇರಿದಂತೆ ಸೌಕರ್ಯಗಳನ್ನು ಒದಗಿಸಲು ಸರ್ಕಾರದೊಂದಿಗೆ ನಿರಂತರ ಪ್ರಯತ್ನ ಮಾಡುವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಮುಖಂಡರಾದ ಡಿ.ಜಿ. ಗುರಿಕಾರ. ಜೇವಲೆಪ್ಪ ನಾಯ್ಕು, ಆರ್ ಡಿಸಿಸಿ ಬ್ಯಾಂಕ ನಿರ್ದೇಶಕ ಬಸವರಾಜಗೌಡ ಗಣೇಕಲ್,ಗುಂಡಪ್ಪ ನಾಯಕ,ಗ್ರಾಮ ಪಂಚಾಯತ್ ಅಧ್ಯಕ್ಷೆ ಸೋಮಮ್ಮ ನಾಯಕ್, ಶಿವರಡ್ಡಿ ಪಾಟೀಲ್ ಸೇ-ರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಒಂದು ಸಾವಿರ ಪಿಎಸ್‌ಐ ಹುದ್ದೆ ಖಾಲಿ, ಶೀಘ್ರವೇ ನೇಮಕಾತಿ: ಸಚಿವ ಪರಮೇಶ್ವರ್

ಕೊಪ್ಪಳ ಜೂ 22– ಪಿಎಸ್‌ಐ ನೇಮಕಾತಿ ಹಗರಣದ ಬಳಿಕ ಐದು ವರ್ಷಗಳ ಕಾಲ ಯಾವುದೇ ಪೊಲೀಸ್ ನೇಮಕಾತಿ ಆಗಿಲ್ಲ. ಒಂದು ಸಾವಿರ ಪಿಎಸ್‌ಐ ಹುದ್ದೆಗಳು ಖಾಲಿ ಇವೆ. ನಮ್ಮ ಸರ್ಕಾರದಿಂದ ಶೀಘ್ರವಾಗಿ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.



ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಇಂದು (ಭಾನುವಾರ) ಭೇಟಿ ನೀಡಿದ್ದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈಗಾಗಲೇ 500 ಪಿಎಸ್‌ಐ ಹುದ್ದೆಗಳಿಗೆ ನೇಮಕಾತಿ ನಡೆದಿದ್ದು, ಅವರೆಲ್ಲ ತರಬೇತಿ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ ಎಂಟು ಸಾವಿರ ಕಾನ್‌ಸ್ಟೇಬಲ್ ಹುದ್ದೆಗಳು ಖಾಲಿ ಇವೆ. ಆದ್ಯತೆಯ ಮೇರೆಗೆ ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು. ಜೊತೆಗೆ ರಾಜ್ಯದಲ್ಲಿ ಹೆಚ್ಚುವರಿ ಟ್ರಾಫಿಕ್ ಪೊಲೀಸ್ ಸ್ಟೇಷನ್ ಸೇರಿದಂತೆ ಇನ್ನಿತರ ಕಾರ್ಯಚಟುವಟಿಕೆಗಳಿಗೆ ಮುಂದಿನ ಬಜೆಟ್‌ನಲ್ಲಿ ಅನುದಾನ ಮೀಸಲಿಡಲಾಗುವುದು ಎಂದರು.

ಆಳಂದ ಶಾಸಕ ಬಿ.ಆರ್. ಪಾಟೀಲ್, ಸಚಿವ ಹೆಚ್. ಕೆ. ಪಾಟೀಲ್ ಆರೋಪದ ಬಗ್ಗೆ ಪ್ರತಿಕ್ರಿಯಿಸಿ, ಅವರು ಆರೋಪ ಮಾಡಿದ್ದು ಸರ್ಕಾರದ ವಿರುದ್ಧವಲ್ಲ. ಹೆಚ್.ಕೆ ಪಾಟೀಲ್ ಅವರು ಗಣಿ ಹಗರಣದಲ್ಲಿ 1.5 ಲಕ್ಷ ಕೋಟಿ ರೂಪಾಯಿ ಬೇರೆಯವರ ಪಾಲಾಗಿದೆ. ಈ ಕುರಿತು ತನಿಖೆಯಾಗಲಿ, ಹಗರಣದಲ್ಲಿ ಭಾಗಿಯಾದವರ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಅದನ್ನು ಪರಿಶೀಲಿಸಲಾಗುವುದು. ಬಿ.ಆರ್. ಪಾಟೀಲ್ ಹಿರಿಯರು, ಅವರ ಸಲಹೆಯನ್ನು ಕೂಡ ಸರ್ಕಾರ ಸ್ವೀಕರಿಸಲಿದೆ. ಸರ್ಕಾರ ಎಲ್ಲರ ಕೆಲಸಕ್ಕೂ ಆದ್ಯತೆ ನೀಡುತ್ತಿದೆ. ಇಲ್ಲಿ ಯಾರನ್ನು ತೇಜೋವಧೆ ಮಾಡುವ ಮತ್ತು ಅವರ ಮಾತಿಗೆ, ಸಲಹೆಗಳಿಗೆ ವಿರುದ್ಧವಾದ ಕೆಲಸ ಮಾಡುತ್ತಿಲ್ಲ ಎಂದು ತಿಳಿಸಿದರು.

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅವರು ಈ ಹಿಂದೆ ಗಂಗಾವತಿ ಡ್ರಗ್ಸ್ ಹಬ್ ಆಗಿದೆ ಎಂದು ಸದನದಲ್ಲೇ ಹೇಳಿದ್ದರು. ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ? ಎಂಬ ಮಾಧ್ಯಮದವರ ಪ್ರಶ್ನೆಗೆ, ರಾಜ್ಯದ ಯಾವುದೇ ಪ್ರದೇಶದಲ್ಲಾಗಲಿ ಗಾಂಜಾ, ಡ್ರಗ್ಸ್ ಸೇವನೆ, ಮಾರಾಟ ಸಹಿಸಲ್ಲ. ಗಂಗಾವತಿ ಅಷ್ಟೇ ಅಲ್ಲ ರಾಜ್ಯದ ಯಾವ ಭಾಗದಲ್ಲಿಯೂ ಇಂತಹ ಘಟನೆಗಳು ಜರುಗುದಂತೆ ನೋಡಿಕೊಳ್ಳಲು ನಾವು ಆಯಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮುಕ್ತ ಅಧಿಕಾರ ನೀಡಿದ್ದೇವೆ. ಇದರಲ್ಲಿ ಸರ್ಕಾರದ ಯಾವುದೇ ವ್ಯಕ್ತಿಗಳು ಒತ್ತಡ ಹಾಕಿಲ್ಲ. ಇನ್ಮುಂದೆ ರಾಜ್ಯದ ಎಲ್ಲಿಯೂ ಇಂತಹ ಪ್ರಕಣಗಳು ನಡೆಯಲು ಬಿಡುವುದಿಲ್ಲ ಎಂದು ಹೇಳಿದರು.

# ಯೋಗವೆಂಬುದು ಜೀವನದ ಭಾಗವಾಗಬೇಕು – ಮಹೇಶ್ ಗುರೂಜಿ

ಜನವಾದಿ ವಾರ್ತೆ

ಕವಿತಾಳ ಜೂ 21– ಯೋಗ ಎಂಬುದು ಕೇವಲ ಒಂದು ದಿನದ ಆಚರಣೆಯಲ್ಲ. ಬದಲಿಗೆ ಅದು ನಮ್ಮ ಪ್ರತಿನಿತ್ಯದ ಜೀವನದ ಭಾಗವಾಗಬೇಕು.




ಪ್ರತಿನಿತ್ಯ ಯೋಗಾಭ್ಯಾಸ ಮಾಡುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಿದ್ಧಿ ಸಮಾಧಿ ಯೋಗದ ಯೋಗ ಗುರು ಮಹೇಶ್ ಗುರೂಜಿ ಹೇಳಿದರು.

11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಪಟ್ಟಣದ ಕಲ್ಮಠದ ಆವರಣದಲ್ಲಿ ಶನಿವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಯೋಗ ಒಂದು ದಿನಕ್ಕೆ ಸಿಮೀತವಾಗದೇ ಪ್ರತಿ ದಿನ ಒಂದು ಗಂಟೆ ಯೋಗಕ್ಕಾಗಿ ಮೀಸಲು ಇಡಬೇಕು. ಕ್ರಮಬದ್ಧವಾಗಿ ಯೋಗ ಮಾಡುವುದರಿಂದ ಅನೇಕ ರೋಗಗಳು ವಾಸಿಯಾಗುತ್ತವೆ ಮತ್ತು ದೇಹ ಸದೃಢವಾಗುತ್ತದೆ ಪ್ರತಿನಿತ್ಯ ಯೋಗ ಮಾಡಿ ಅರೋಗ್ಯ ಕಾಪಾಡಿಕೊಳ್ಳಿ ಎಂದು ಹೇಳಿದರು.

ಬಾಗಲವಾಡ ಹತ್ತಿರದ ಲಕ್ಷ್ಮೀ ಕ್ಯಾಂಪ್‌ನ ಓಂ ಶಕ್ತಿ ಪಿರಮಿಡ್ ಧ್ಯಾನ ಮಂದಿರದ ಮುಖ್ಯಸ್ಥೆ ಸಾವಿತ್ರಿ ಮಾತನಾಡಿದರು.

ಲಿಂಗಸೂಗೂರಿನ ಪತಂಜಲಿ ಯೋಗ ಸಮಿತಿಯ ಯೋಗ ಶಿಕ್ಷಕ ಸಂಜೀವ ಕುಮಾರ್ ಶ್ರೀವಾಸ್ತವ್ ಯೋಗಾಸನಗಳನ್ನು ಮಾಡಿಸಿದರು. ಹಾಗೂ ಪ್ರತಿಯೊಂದು ಆಸನಗಳ ಉಪಯೋಗಗಳ ಬಗ್ಗೆ ಮಾಹಿತಿ ನೀಡಿದರು. ದೇವರಾಜ ನಾಗಲೀಕರ್ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಯೋಗ ಸಾಧಕರು, ಯೋಗಾಸಕ್ತರು,ಊರಿನ ಗಣ್ಯರು, ಮಹಿಳೆಯರು ಮತ್ತು ಮಕ್ಕಳು ಉಪಸ್ಥಿತರಿದ್ದರು.

# ಸನಾತನ ಪರಂಪರೆಯ ತಾಣ ಭಾರತ; ಜ್ಯೋತಿ ಅಕ್ಕ

ಜನವಾದಿ ವಾರ್ತೆ



ಸಿರವಾರ ಜೂ 22– ಭಾರತ ದೇಶವು ಸನಾತನ ಪರಂಪರೆಯ ತಾಣವಾಗಿದೆ.ವಿದೇಶಿಗರ ಚಿತ್ತ ಭಾರತದತ್ತ ತಿರುಗಿದೆ. ಭಾರತೀಯ ಮೂಲದ ಯೋಗ ಮತ್ತು ಆಯುರ್ವೇದ, ಸಿದ್ಧ, ಯುನಾನಿ, ಹೋಮಿಯೋಪತಿ ಭಾರತೀಯ ಪ್ರಾಚೀನ ವೈದ್ಯಕೀಯ ಚಿಕಿತ್ಸಾ ಪದ್ಧತಿಗಳು. ಪುನಃ ಎಲ್ಲರೂ ಅವುಗಳತ್ತ ಮುಖ ಮಾಡುತ್ತಿದ್ದಾರೆ. ವಿಶ್ವದಾದ್ಯಂತ ಈ ಚಿಕಿತ್ಸಾ ಪದ್ಧತಿಗಳನ್ನು ಅನುಸ–ರಿಸುತ್ತಿದ್ದಾರೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಸಂಚಾಲಕರಾದ ಜ್ಯೋತಿ ಅಕ್ಕ ಹೇಳಿದರು.

ಪಟ್ಟಣದ ಜ್ಞಾನ ಭಾರತಿ ಶಾಲೆಯಲ್ಲಿ ಲಯನ್ಸ್ ಕ್ಲಬ್ ಮತ್ತು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಸಹಯೋಗದೊಂದಿಗೆ ಭಾನುವಾರ ಹಮ್ಮಿಕೊಳ್ಳಲಾದ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಲಯನ್ಸ್ ಕ್ಲಬ್ ನ ಎನ್ ಉದಯಕುಮಾರ ಮಾತನಾಡಿ ಕೇವಲ ಜೂನ್21 ರಂದು ಮಾತ್ರ ಯೋಗಾಭ್ಯಾಸ ಮಾಡದೆ ನಿರಂತರವಾಗಿ ಯೋಗಾಭ್ಯಾಸ ಮಾಡುವುದ–ರಿಂದ ವೈದ್ಯಕೀಯ ಲೋಕವನ್ನೂ ನಾಚಿಸುವಂತಹ ಪರಿಣಾಮವನ್ನು ಬೀರುತ್ತದೆ. ಇಡೀ ವಿಶ್ವಕ್ಕೆ ಭಾರತೀಯರ ಹೆಮ್ಮೆಯ ಕೊಡುಗೆ ಯೋಗ ಎಂದರು.

ಯೋಗತರಬೇತುದಾರ ಮಹಾಂತೇಶ ಎನ್ ವಿವಿಧ ಯೋಗಾಸನ, ಪ್ರಾಣಾಯಾಮ, ಧ್ಯಾನವನ್ನು ಹೇಳಿಕೊಟ್ಟರು.

ಲಯನ್ಸ್ ಕ್ಲಬ್ ಅಧ್ಯಕ್ಷ ಜಿ ವೀರೇಶ, ಪ.ಪಂ ಅಧ್ಯಕ್ಷ ವೈ ಭೂಪನಗೌಡ, ಜ್ಞಾನ ಭಾರತಿ ಶಾಲೆಯ ಮುಖಸ್ಥ ಪ್ರಕಾಶ ಪಾಟೀಲ, ಪತ್ರಕರ್ತ ಸುರೇಶ ಹೀರಾ ಅರಿಕೇರಿ ಮಲ್ಲಿಕಾರ್ಜುನ ಸಾಹುಕಾರ, ಶಿವಶಂಕರ ಪಾಟೀಲ ಆಲ್ಕೋಡ, ಅಚ್ಚಾ ಶ್ರೀಶೈಲ, ಪರಮೇಶಪ್ಪ ಜೆಇ, ಕುರುಕುಂದಿ ಸಿದ್ದನಗೌಡ, ಶಿವಲಿಂಗಯ್ಯ ಸ್ವಾಮಿ ಗಲಗ, ಎಂ ನಿಂಬೆಯ್ಯ ಸ್ವಾಮಿ, ಪತ್ತಾರ ನಾಗಪ್ಪ, ಪಿ ಶ್ರೀನಿವಾಸ, ವೀರೇಶ ಸ್ವಾಮಿ ಪಿಡಬ್ಲ್ಯೂಡಿ, ಶ್ರೀಧರ ಸ್ವಾಮಿ, ಶರಣಪ್ಪ ಹುಯಿಲಗೋಳ, ಭಗರಾಜ ಪಟೇಲ್,ಆನಂದರಾಮ್, ಅಶೋಕ, ಎನ್ ಸುಧಾ, ಅಕ್ಕಮಹಾದೇವಿ ನಿಂಬೆಯ್ಯ ಸ್ವಾಮಿ, ಭಾಗೀರತಿ ಪಾಟೀಲ, ಸೇರಿದಂತೆ ಮಹಿಳೆಯರು ಮತ್ತು ಶಿಕ್ಷಕರು ಮತ್ತು ಮಕ್ಕಳು ಇದ್ದರು.

# ಪಾಮನಕಲ್ಲೂರು ಗ್ರಾ. ಪಂ. ಅಧ್ಯಕ್ಷರ ವಿರುದ್ಧ ಅವಿಶ್ವಾಸ ಮಂಡನೆ ಯಶಸ್ವಿ

ಜನವಾದಿ ವಾರ್ತೆ



ಕವಿತಾಳ ಜೂ 22– ಸಮೀಪದ ಮಸ್ಕಿ ತಾಲೂಕಿನ ಪಾಮನಕಲ್ಲೂರು ಗ್ರಾಮ ಪಂಚಾಯತಿ ಅಧ್ಯಕ್ಷರ ವಿರುದ್ಧ ಅವಿಶ್ವಾಸ ಮಂಡನೆ ಮಾಡಲಾಯಿತು.

ಒಟ್ಟು 26 ಸದಸ್ಯ ಬಲವನ್ನು ಹೊಂದಿದ ಪಂಚಾಯತಿಯಲ್ಲಿ ಪರಿಶಿಷ್ಟ ಜಾತಿ ಮಹಿಳೆ ಮೀಸಲಾತಿಯಲ್ಲಿ ಪಾರ್ವತಮ್ಮ ಹುಲಗಪ್ಪ ಅವರು ಕಳೆದ ಒಂದು ವರ್ಷ ಮೂರು ತಿಂಗಳಿಂದ ಅಧ್ಯಕ್ಷರಾಗಿದ್ದರು.

ಅವಿಶ್ವಾಸ ಸಭೆಗೆ 23 ಸದಸ್ಯರು ಹಾಜರಾಗಿದ್ದರು.ಮತ್ತು ಮೂವರು ಸದಸ್ಯರು ಗೈರಾಗಿದ್ದರು ಎಂದು ಚುನಾವಣಾ ಅಧಿಕಾರಿ ಲಿಂಗಸಗೂರು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲ್ ಶೆಟ್ಟಿ ತಿಳಿಸಿದರು.

ಅವಿಶ್ವಾಸ ಮಂಡನೆ ಯಶಸ್ವಿಯಾಗಿದ್ದು ಉಳಿದ ಅವಧಿಗೆ ನೂತನ ಅಧ್ಯಕ್ಷರ ಆಯ್ಕೆಗೆ ಜಿಲ್ಲಾಧಿಕಾ–ರಿಗಳ ಆದೇಶದಂತೆ ದಿನಾಂಕ ನಿಗದಿ ಮಾಡಲಾಗುವುದು ಎಂದರು.

ಅಭಿವೃದ್ಧಿ ಅಧಿಕಾರಿ ರಾಮಣ್ಣ ನಡಿಗೇರ್, ಉಪಾಧ್ಯಕ್ಷ ಲಕ್ಷ್ಮಪ್ಪ ನಾಯಕ ತುಪ್ಪದೂರು, ಸದಸ್ಯರಾದ ದುರುಗಪ್ಪ, ವೆಂಕಟೇಶ, ಶ್ರೀನಿವಾಸ, ಬಸವಲಿಂಗಯ್ಯ, ಶರಣಪ್ಪ, ಸೈಕಲ್ ರಾಜಾ ಸಾಬ್, ಶರಣಪ್ಪ, ಕೆಂಚಪ್ಪ, ಶಿವಪ್ಪ, ಅಮರೇಶ, ಶಿವಲೀಲಾ ಶಿವುಕುಮಾರ, ಖಾಜಮ್ಮ ಲಾಳೆಸಾಬ್, ರೇಣುಕಾ ಲಿಂಗಪ್ಪ, ತಿಮಮ್ಮ ವೆಂಕಟೇಶ, ರಿಯನ್ ಬೇಗಂ ಮಹಮ್ಮದ್ ರಫಿ, ಈರಮ್ಮ ವಿಶ್ವಾನಾಥ, ಬಸಮ್ಮ ರಾಮಪ್ಪ, ಶ್ವೇತಾ ಅಮರೇಶ, ಶಿವನಮ್ಮ ಸಿದ್ದಪ್ಪ, ಶಕುಂತಲಾ ನಾಗರಾಜ, ಈರಮ್ಮ ದುರುಗಪ್ಪ, ಶಿಲ್ಪಾ ಆದೇಶ ಸಭೆಯಲ್ಲಿ ಹಾಜರಿದ್ದರು. ಅಧ್ಯಕ್ಷೆ ಪಾರ್ವತಮ್ಮ ಹುಲಗಪ್ಪ, ಸದಸ್ಯರಾದ ಮಲ್ಲಮ್ಮ ಬಸವರಾಜ, ಅಂಬಮ್ಮ ಹುಸೇನಪ್ಪ ಸಭೆಗೆ ಗೈರಾಗಿದ್ದರು.

ಮುಖಂಡರಾದ ಕಿರಲಿಂಗಪ್ಪ ಕವಿತಾಳ, ಅಮರೇಗೌಡ ಅಮೀನಗಡ, ಆರ್. ಐ. ತಿಪ್ಪಣ್ಣ ತಳವಾರ್, ಗ್ರಾಮ ಆಡಳಿತಧಿಕಾರಿಗಳಾದ ರವಿಕುಮಾರ, ನಿಂಗಪ್ಪ, ಅನಿತಾ ಮತ್ತು ಶಿವಲೀಲಾ ಇದ್ದರು.

# ಡಿ.ಕೆ.ಶಿವಕುಮಾರ್ ಸಿಎಂ ಕನಸು ಕಾಣಬೇಕಷ್ಟೇ..! : ಹೆಚ್ಡಿಕೆ ವ್ಯಂಗ್ಯ





ಮಂಡ್ಯ ಜೂ 22– ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಸ್ಥಾನದ ಕನಸು ಕಾಣಬೇಕು ಅಷ್ಟೇ ಎಂದು ಕೇಂದ್ರದ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ವ್ಯಂಗ್ಯವಾಡಿದರು. ಬಸ್ ನಿಲ್ದಾಣದ ಮುಂಭಾಗ ಆಟೋ ನಿಲ್ದಾಣ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇ–ರಿಸಿದ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

2028ಕ್ಕೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದು ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂಬ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ಶಿವಕುಮಾರ್ ಅವರಿಗೆ ಯಾರು ಮುಖ್ಯಮಂತ್ರಿ ಸ್ಥಾನ ಬಿಟ್ಟುಕೊಡುತ್ತಾರೆ. ನಮ ಕೈಯಲ್ಲಿ ಏನೂ ಇಲ್ಲ. ಎಲ್ಲವೂ ಭಗವಂತನ ಕೈಯಲ್ಲಿದೆ ಎಂದು ಅವರು ಈ ರೀತಿ ತಿಳಿಸಿದರು.

ಮೈ ಶುಗರ್ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿಪಡಿಸಲು ಸಿದ್ಧವಿದ್ದು, ಈ ವಿಚಾರವನ್ನು ಶಾಲೆಯ ಟ್ರಸ್ಟಿಗಳಿಗೆ ತಿಳಿಸಲಾಗಿದೆ. ಅದನ್ನು ಬಳಸಿಕೊಳ್ಳುವುದು ಅವರಿಗೆ ಸೇರಿದ್ದು. ಇಂತಹ ಆಸ್ತಿಯನ್ನು ಗುತ್ತಿಗೆ ಆಧಾರದ ಮೇಲೆ ನೀಡುವುದು ಎಂದರೆ ಹೇಗೆ? ಇದು ಹಗಲು ದರೋಡೆಯಾಗಿದೆ.

ಶಾಲೆಯ ಅಭಿವೃದ್ಧಿಗೆ 25 ಕೋಟಿ ಬೇಕು ಎಂದರೂ ಒದಗಿಸಲು ಸಿದ್ದನಿದ್ದೇನೆ. ಮಂಡ್ಯ ಜಿಲ್ಲೆಗೆ ನಾನು ಏನೂ ಮಾಡಿಲ್ಲ ಅಂತಾರೆ. ಕಾಂಗ್ರೆಸ್ ನಾಯಕರು ಗುಡ್ಡೆ ಹಾಕಿರುವುದಾದರೂ ಏನು ಎಂದು ಪ್ರಶ್ನಿಸಿದರು. ಅಧಿಕಾರಕ್ಕೆ ಬಂದು ಎರಡು ವರ್ಷ ಆದಮೇಲೆ ಕಾನೂನು ಸಚಿವ ಎಚ್.ಕೆ.ಪಾಟೀಲ್ ಗೆದ್ದಿದ್ದಾರೆ. ಯಾರ ಮೇಲೂ ಕ್ರಮ ಆಗುವುದಿಲ್ಲ. ಪ್ರಸಕ್ತ ವಿಚಾರಗಳನ್ನು ಡೈವರ್ಶನ್ ಮಾಡಲು ನಾಟಕವಾಡುತ್ತಿದ್ದಾರೆ ಅಷ್ಟೇ ಎಂದರು.

ಬೀದರ್‌ನಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಮುಚ್ಚುವ ಹಂತಕ್ಕೆ ಬಂದಿದೆ. ಮಂಡ್ಯ ಕೃಷಿ ವಿವಿಗೆ ಎಷ್ಟು ಅನುದಾನ ಕೊಟ್ಟಿದ್ದಾರೆ? ಎಷ್ಟು ವಿವಿಗಳನ್ನು ಮುಚ್ಚಿದ್ದಾರೆ? ಪ್ರಚಾರಕ್ಕಾಗಿ ಕೆಲಸ ಮಾಡಬಾರದು ಎಂದು ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದರು.

ವಿಧಾನಸೌಧದಲ್ಲಿ ಮಧ್ಯವರ್ತಿಗಳ ಅವಶ್ಯಕತೆಯಿಲ್ಲ. ಆಯಾಯ ಇಲಾಖೆಗಳಲ್ಲಿ ಎಷ್ಟು ಕೊಡಬೇಕು ಎಂಬುದನ್ನು ನಿಗದಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

**ಸುರಂಗ ರಸ್ತೆ:**

ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಕೇವಲ ಬೆಂಗಳೂರು ಮಾತ್ರವಲ್ಲ. ಇಡೀ ರಾಜ್ಯದಲ್ಲಿ ಸುರಂಗ ರಸ್ತೆ ಮಾಡಲಿ. ಅವರ ಮಾತುಗಳು ಯಾವುವು ಕಾರ್ಯಗತವಾಗುವುದಿಲ್ಲ. 2027ಕ್ಕೆ ಎತ್ತಿನಹೊಳೆ ಯೋಜನೆಯ ನೀರನ್ನು ಕೋಲಾರಕ್ಕೆ ತರುವುದಾಗಿ ಉಪಮುಖ್ಯಮಂತ್ರಿ ಹೇಳಿದ್ದಾರೆ. ಆ ಯೋಜನೆ ಕಾಡುಮನೆ ಎಸ್ಟೇಟ್‌ನಿಂದ ಮುಂದೆ ಬಂದಿಲ್ಲ. ಈಗಾಗಲೇ 15 ಸಾವಿರ ಕೋಟಿ ರೂ. ಲೂಟಿಯಾಗಿದೆ.

2013ರಲ್ಲಿ ಗುದ್ದಲಿ ಸರ್ಕಾರು ಗುದ್ದಲಿ ಪೂಜೆ ಮಾಡಿತ್ತು. ಆಗ ಎರಡೇ ವರ್ಷದಲ್ಲಿ ಕೋಲಾರ, ಚಿಕ್ಕಬಳ್ಳಾಪುರಕ್ಕೆ ನೀರು ಕೊಡುತ್ತೇವೆ ಎಂದಿದ್ದರು. ಈಗ ಬೆಂಗಳೂರಿನ ಕೊಳಚೆ ನೀರನ್ನು ಪೂರೈಸಿದ್ದಾರೆ. ಬೆಳೆದ ತರಕಾರಿಯನ್ನೂ ಯಾರು ಖರಿದಿಸದಂತೆ ಮಾಡಿದ್ದಾರೆ. ಮಂಡ್ಯ ಜಿಲ್ಲೆಯ ಪ್ರತಿ ಪಂಚಾಯ್ತಿ ಮಟ್ಟದಲ್ಲಿ ಸುಜಜ್ಜಿತ ಶಾಲೆ, ಆಸ್ಪತ್ರೆ ಮಾಡಬೇಕೆಂಬ ಕನಸಿದೆ. 8 ಕೋಟಿ ರೂ. ವೆಚ್ಚದಲ್ಲಿ ಶಾಲೆಗಳ ನಿರ್ಮಾಣಕ್ಕೆ ನೀಲನಕ್ಷೆ ಸಿದ್ಧವಾಗಿದ್ದು, 100 ಬಸ್ ತಂಗುದಾಣಗಳನ್ನು ನಿರ್ಮಿಸಲಾಗಿದೆ. ರಾಜ್ಯ ಸರ್ಕಾರ ಸಹಕಾರ ಕೊಟ್ಟು ಪ್ರೋತ್ಸಾಹ ನೀಡಿದರೆ ಮಂಡ್ಯ ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪಿಸಲಾಗುವುದು ಎಂದರು.

# ಮಾಜಿ ಪ್ರಧಾನಿ ದೇವೇಗೌಡರಿಗೆ ಶ್ರೀಗಂಗ ಸಾಮ್ರಾಟ ಶ್ರೀಪುರುಷ ಪ್ರಶಸ್ತಿ ಪ್ರದಾನ




ಬೆಂಗಳೂರು ಜೂ 22– ಹೆಚ್.ಡಿ. ದೇವೇಗೌಡರು ಭಾರತದ ಇತಿಹಾಸದಲ್ಲಿ ಪ್ರಧಾನಿಯಾದ ಏಕೈಕ ಕನ್ನಡಿಗರೆಂಬ ಹಿರಿಮೆಯನ್ನು ಕನ್ನಡ ನಾಡಿಗೆ ತಂದುಕೊಟ್ಟಿರುವ ಅಪರೂಪದ ಸಾಧಕರು. ರೈತಾಪಿ ಕುಟುಂಬದಲ್ಲಿ ಜನಿಸಿ ಪ್ರಧಾನಿ ಪಟ್ಟವೇರಿದ ಮಣ್ಣಿನ ಮಗ ಎಂಬ ಕೀರ್ತಿಗೆ ಭಾಜನರಾದವರು.

ನಾನು ಅಧಿಕಾರದಲ್ಲಿದ್ದಾಗ ರೈತರ ಹಿತ ಕಾಯದಿದ್ದರೆ ಅಂಥ ಅಧಿಕಾರದಲ್ಲಿದ್ದೇನು ಪ್ರಯೋಜನ? ಎಂದು ಗುಡುಗಿದವರು. ಎಂದೂ ಅಧಿಕಾರಕ್ಕಾಗಿ ಹಪಹಪಿಸಿದವರಲ್ಲ. 1983ರಲ್ಲಿಯೇ ಕರ್ನಾಟಕದ ಮುಖ್ಯಮಂತ್ರಿಯಾಗುವ ಅವಕಾಶ ಹೊಂದಿದ್ದರಾದರೂ ಸಂದರ್ಭವಶಾತ್ ಈ ಅವಕಾಶ ಬಿಟ್ಟುಕೊಟ್ಟರು.

ಡಿಪ್ಲೊಮಾ ಎಂಜಿನಿಯ–ರಿಂಗ್ ಶಿಕ್ಷಣ ಪಡೆದು ತಾಲ್ಲೂಕು ಬೋರ್ಡ್ ಸದಸ್ಯರಾಗಿ, ಶಾಸಕರಾಗಿ, ವಿರೋಧ ಪಕ್ಷದ ನಾಯಕರಾಗಿ, ವಿವಿಧ ಖಾತೆಗಳ ಸಚಿವ ರಾಗಿ, ಮುಖ್ಯಮಂತ್ರಿಯಾಗಿ, ಭಾರತ ದೇಶದ ಪ್ರಧಾನಿಯಾಗಿ ದೇವೇಗೌಡರು ಮೂಡಿಸಿದ ಹೆಜ್ಜೆಗುರುತುಗಳು ಅನನ್ಯ, ಅನುಕರಣೀಯ.

ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದದ್ದು 18 ತಿಂಗಳು ಮಾತ್ರ. ಆದರೆ ಈ ಅವಧಿಯಲ್ಲಿ ಉತ್ತಮ ಆಡಳಿತ ನೀಡಿ ರಾಜ್ಯದ ಜನತೆಯ ಕ್ಷೇಮಾಭಿವೃದ್ಧಿಗೆ ಹಲವಾರು ಉತ್ತಮ ಕೊಡುಗೆಗಳನ್ನು ಕೊಟ್ಟರು. ಎಲ್ಲಕ್ಕಿಂತ ಮುಖ್ಯವಾಗಿ, ತಲೆನೋವಾಗಿ ಪರಿಣಮಿಸಿದ್ದ ಹುಬ್ಬಳ್ಳಿ ಈದ್ಗಾ ಮೈದಾನದ ವಿವಾದವನ್ನು ಸೌಹಾರ್ದಯುತವಾಗಿ ಬಗೆಹರಿಸಿದ್ದು ಇವರ ಸಾಧನೆಗೆ ಕಳಸಪ್ರಾಯ ಎಂದೇ ಹೇಳಬಹುದು.

ಪ್ರಧಾನಿಯಾಗಿ ಕೇವಲ ಹತ್ತು ತಿಂಗಳ ಕಾಲ ಅಧಿಕಾರದಲ್ಲಿದ್ದರೂ ಭ್ರಷ್ಟಾಚಾರ ರಹಿತ, ಹಗರಣ ಮುಕ್ತ, ಕಳಂಕ ರಹಿತ ಆಡಳಿತ ನೀಡಿದವರು. ಇವರ ವಿದೇಶಾಂಗ ನೀತಿಯನ್ನು ವಿದೇಶೀ ಪತ್ರಿಕೆಗಳೂ ಹೊಗಳಿ ಬರೆದವು. ಕೃಷಿಕವರ್ಗಕ್ಕೆ ವಿಶೇಷ ಸಹಾನುಭೂತಿಯನ್ನು ಹೊಂದಿರುವ ಇವರ ಆರ್ಥಿಕ ದೃಷ್ಟಿಕೋನವನ್ನು ಗೌಡನಾಮಿಕ್ಸ್ ಎಂದೇ ಕರೆಯಲಾಗುವುದು.

ಜಮ್ಮು ಮತ್ತು ಕಾಶ್ಮೀರಕ್ಕೆ ಇವರು ಪ್ರಧಾನಿಯಾಗುವ ತನಕ ಆರು ವರ್ಷಗಳ ಕಾಲ ಯಾವೊಬ್ಬ ಪ್ರಧಾನಿಯೂ ಭೇಟಿ ನೀಡಿರಲಿಲ್ಲ. ಅಲ್ಲಿಗೆ ಭೇಟಿ ನೀಡಿ ಕಣಿವೆಯ ಜನತೆಯಲ್ಲಿ ಧೈರ್ಯ ತುಂಬಿ ಯಶಸ್ವಿಯಾಗಿ ಚುನಾವಣೆ ನಡೆಸಿದ್ದು ಇವರ ಸಾಧನೆ.ಈಗಲೂ ರಾಜ್ಯ ಸಭಾ ಸದಸ್ಯರಾಗಿ, ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾಗಿ ಸಕ್ರಿಯ ರಾಜಕಾರಣದಲ್ಲಿರುವ ದೇವೇಗೌಡರು ಭಾರತದ ಎಲ್ಲ ರಾಷ್ಟ್ರಪತಿಗಳನ್ನು, ಎಲ್ಲ ಪ್ರಧಾನಿಗಳನ್ನು ಕಂಡಿರುವ ಏಕೈಕ ಮಾಜಿ ಪ್ರಧಾನಿಯಾಗಿದ್ದಾರೆ.

92 ಸಾರ್ಥಕ ವಸಂತಗಳನ್ನು ಪೂರೈಸಿ ಶತಕದೆಡೆಗೆ ಹೆಜ್ಜೆ ಹಾಕಿರುವ ದೇವೇಗೌಡರ ನೆನಪಿನ ಶಕ್ತಿ, ಮಾನಸಿಕ ಸ್ಪಷ್ಟತೆ, ಮನೋಬಲ ವಿಸಯ ಮೂಡಿಸುತ್ತದೆ. ಸಂಸತ್ತಿನ ಚರ್ಚೆಗಳಲ್ಲಿ ಈಗಲೂ ಕ್ರಿಯಾಶೀಲವಾಗಿ ಭಾಗಿಯಾಗುವ ಈ ನೇಗಿಲಯೋಗಿ ಕರ್ಮಯೋಗಿ ಎಂಬ ಅಭಿಧಾನಕ್ಕೂ ನೈಜ ರೀತಿ ಅರ್ಹರು.

ದೇವೇಗೌಡರ ಜೀವನ–ಸಾಧನೆಗಳನ್ನು ಕುರಿತು ಸಾಕಷ್ಟು ಕೃತಿಗಳು ಬಂದಿವೆ. ಬರುತ್ತಲೂ ಇವೆ. ದೇವೇಗೌಡರ ಜೀವನ ಚರಿತ್ರೆ ಎಂದರೆ ಅದು ಕರ್ನಾಟಕದ ಮತ್ತು ಭಾರತದ ಆಯಾ ಕಾಲಘಟ್ಟಗಳ ಇತಿಹಾಸವಾಗಿಯೂ ದಾಖಲಾಗುವುದರಿಂದ ಮಹತ್ವ ಪಡೆಯುತ್ತದೆ.

ಅದೇ ರೀತಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅಭಿನಂದನಾ ಸಮಿತಿ ವತಿಯಿಂದ ಮಣ್ಣಿನ ಮಗ ಹೆಚ್.ಡಿ. ದೇವೇಗೌಡ: ಹಳ್ಳಿಯಿಂದ ದಿಲ್ಲಿವರೆಗೆ, ಬದುಕು ಮತ್ತು ಸಾಧನೆ ಎಂಬ ಕೃತಿಯನ್ನು ಹೊರತಂದಿದ್ದು ಇಂದು ಡಾ. ಬಾಬು ಜಗಜೀವನರಾಮ್ ಭವನದಲ್ಲಿ ಲೋಕಾರ್ಪಣೆಗೊಂಡಿದೆ.ಜೊತೆಗೆ ದೇವೇಗೌಡರಿಗೆ ಶ್ರೀ ಗಂಗಸಾಮ್ರಾಟ ಶ್ರೀ ಪುರುಷ ಪ್ರಶಸ್ತಿ ಪ್ರದಾನ ಮತ್ತು 93 ವಿವಿಧ ಸಾಧಕರಿಗೆ ಹೆಚ್.ಡಿ. ದೇವೇಗೌಡ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮಿಕೊಳ್ಳಲಾಗಿದೆ.

ಡಾ. ಬಿ.ಆರ್. ಸತ್ಯನಾರಾಯಣ ಮತ್ತು ಸ್ನೇಹಿತರು ಈ ಕೃತಿಯನ್ನು ಸಂಗ್ರಹಿಸಿಕೊಟ್ಟಿದ್ದು, ಇದರಲ್ಲಿ ದೇವೇಗೌಡರ ಬಾಲ್ಯ, ಶಿಕ್ಷಣ, ಶಾಸಕರಾಗಿ, ವಿರೋಧ ಪಕ್ಷದ ನಾಯಕರಾಗಿ, ಸಚಿವರಾಗಿ, ಮುಖ್ಯಮಂತ್ರಿಯಾಗಿ, ಪ್ರಧಾನಿಯಾಗಿ, ಮಾಜಿ ಪ್ರಧಾನಿಯಾಗಿ ದೇವೇಗೌಡರ ಯಶೋಗಾಥೆಯನ್ನು ಸಂಕ್ಷಿಪ್ತವಾಗಿ ದಾಖಲಿಸಲಾಗಿದೆ.

ದೇವೇಗೌಡರು ಪ್ರಧಾನಿಯಾದ ಬಳಿಕ ಲೋಕಸಭೆಯಲ್ಲಿ ಮಾಡಿದ ಮೊದಲ ಭಾಷಣ ಮತ್ತು ಪ್ರಧಾನಿ ಹುದ್ದೆಯಿಂದ ನಿರ್ಗಮಿಸುವ ಮುನ್ನ ವಿಶ್ವಾಸಮತ ಕೋರಿ ಮಾಡಿದ ಕೊನೆಯ ಭಾಷಣದ ಕನ್ನಡಾನುವಾದವನ್ನೂ ಕೊಡಲಾಗಿದೆ. ದೇವೇಗೌಡರ ಜೀವಿತದ ವಿವಿಧ ಮಜಲುಗಳ ಅಪರೂಪದ ಛಾಯಾಚಿತ್ರಗಳನ್ನು ಆಕರ್ಷಕವಾಗಿ ಮುದ್ರಿಸಲಾಗಿದೆ.

ದೇವೇಗೌಡರು ರಾಜಕೀಯ ಪ್ರವೇಶ ಮಾಡಿದಂದಿನಿಂದ ಇಂದಿನವರೆಗಿನ ಅಪರೂಪದ ಘಟನಾವಳಿಗಳನ್ನು ಮೆಲುಕು ಹಾಕುವಂತೆ ಮಾಡುವ, ದೇಶವಿದೇಶಗಳ ಮಹಾನ್ ನಾಯಕರು, ಗಣ್ಯರೊಂದಿಗಿನ ಛಾಯಾಚಿತ್ರಗಳು, ಅವರ ಬದುಕು–ಸಾಧನೆಯನ್ನು ಅನಾವರಣ ಮಾಡುವ ಲೇಖನಗಳು ಈ ಕೃತಿಯ ಪ್ರಮುಖ ಆಕರ್ಷಣೆಯಾಗಿವೆ.

# “ಯೋಗಶ್ಚಿತ್ತವೃತ್ತಿ ನಿರೋಧಃ” : ಮನಸ್ಸಿನ ಚಂಚಲತೆಯನ್ನ ನಿಗ್ರಹಿಸುವುದೇ ಯೋಗ

– ದೇವರಾಜ ನಾಗಲೀಕರ್



ಇಂದು ಇಡೀ ವಿಶ್ವದಲ್ಲೆಡೆ ಯೋಗವನ್ನು ಸಂಭ್ರಮದಿಂದ ಆಚ–'ರಿಸಲಾಗುತ್ತಿದೆ. ವೇದ ಗ್ರಂಥಗಳಲ್ಲಿ ಉಪನಿಷತ್ತುಗಳಲ್ಲಿ ಮಹಾಭಾರತ ಭಗವದ್ಗೀತೆಯಲ್ಲಿ ಉಲ್ಲೇಖಿಸಲಾಗಿರುವ ಯೋಗವು 5000 ವರ್ಷಕ್ಕಿಂತಲೂ ಪುರಾತನವಾದದ್ದು. ಯೋಗದ ಹುಟ್ಟಿನ ಬಗ್ಗೆ ಸರಿಯಾದ ದಾಖಲೆಗಳಿಲ್ಲ. ಆಧ್ಯಾತ್ಮಿಕ, ಮಾನಸಿಕ ಮತ್ತು ದೈಹಿಕ ಶಾಂತಿ–ಸಂಯಮಗಳನ್ನು ಕಾಯ್ದುಕೊಳ್ಳಲು ಸಾಧಿಸಲಾಗುವ ಉನ್ನತ ಜೀವನ ಶಿಕ್ಷಣವೇ ಯೋಗ.

ಸಾವಿರಾರು ವರ್ಷಗಳಿಂದಲೂ ಭಾರತ ದೇಶದಲ್ಲಿ ಆಚರಿಸಲ್ಪಡುತ್ತಿರುವ 'ಯೋಗವಿದ್ಯೆಯು' ಋಷಿ ಮುನಿಗಳಾದಿ ಸಾಧಕರಿಂದ ವಿದ್ಯೆ ಮತ್ತು ಜೀವನ ಶೈಲಿಯಾಗಿ ಹರಿದು ಬಂದಿದೆ.

ಯೋಗಶ್ಚಿತ್ತವೃತ್ತಿನಿರೋಧಃ ಎಂದ ಮಹಾ ಯೋಗಾಚಾರ್ಯ ಪತಂಜಲಿ ಮಹರ್ಷಿಗಳು ಯೋಗ ಪ್ರವರ್ತಕರು. ಯೋಗ ಸೂತ್ರಗಳು ಎಂಬ ಗ್ರಂಥದ ಮೂಲಕ, ಕ್ಲಿಷ್ಟಕರವಾದ ಯೋಗ ರಹಸ್ಯ ಗಳನ್ನು ಸುಲಭವಾಗಿ ತಿಳಿಸಿದ್ದಾರೆ.

**ಯೋಗದ ಪರಿಚಯ:**

ಯೋಗವು ಮೂಲಭೂತವಾಗಿ ಅತ್ಯಂತ ಸೂಕ್ಷ್ಮವಾದ ವಿಜ್ಞಾನವನ್ನು ಆಧರಿಸಿದ ಆಧ್ಯಾತ್ಮಿಕ ಶಿಸ್ತು, ಇದು ಮನಸ್ಸು ಮತ್ತು ದೇಹದ ನಡುವೆ ಸಾಮರಸ್ಯವನ್ನು ತರುವತ್ತ ಗಮನಹರಿಸುತ್ತದೆ. ಇದು ಆರೋಗ್ಯಕರ ಜೀವನದ ಕಲೆ ಮತ್ತು ವಿಜ್ಞಾನವಾಗಿದೆ. 'ಯೋಗ' ಎಂಬ ಪದವು ಸಂಸ್ಕೃತ ಮೂಲ 'ಯುಜ್' ನಿಂದ ಬಂದಿದೆ, ಇದರರ್ಥ 'ಸೇರುವುದು' ಅಥವಾ 'ಒಗ್ಗೂಡಿಸುವುದು' ಅಥವಾ ' 'ಕೂಡುವುದು'ಎಂದಾಗುತ್ತದೆ. ಯೋಗ ಗ್ರಂಥಗಳ ಪ್ರಕಾರ ಯೋಗದ ಅಭ್ಯಾಸವು ಸಾರ್ವತ್ರಿಕ ಪ್ರಜ್ಞೆಯೊಂದಿಗೆ ವೈಯಕ್ತಿಕ ಪ್ರಜ್ಞೆಯ ಒಕ್ಕೂಟಕ್ಕೆ ಕಾರಣವಾಗುತ್ತದೆ, ಇದು ಮನಸ್ಸು ಮತ್ತು ದೇಹ, ಮನುಷ್ಯ ಮತ್ತು ಪ್ರಕೃತಿಯ ನಡುವಿನ ಪರಿಪೂರ್ಣ ಸಾಮರಸ್ಯವನ್ನು ಸೂಚಿಸುತ್ತದೆ.

ಆಧುನಿಕ ವಿಜ್ಞಾನಿಗಳ ಪ್ರಕಾರ, ವಿಶ್ವದಲ್ಲಿರುವ ಎಲ್ಲವೂ ಒಂದೇ ಕ್ವಾಂಟಮ್ ಆಕಾಶದ ಅಭಿವ್ಯಕ್ತಿಯಾಗಿದೆ. ಈ ಅಸ್ತಿತ್ವದ ಏಕತೆಯನ್ನು ಅನುಭವಿಸುವವನು ಯೋಗದಲ್ಲಿದ್ದಾನೆ ಎಂದು ಹೇಳಲಾಗುತ್ತದೆ ಮತ್ತು ಅವನನ್ನು ಯೋಗಿ ಎಂದು ಕರೆಯಲಾಗುತ್ತದೆ, ಮುಕ್ತಿ, ನಿರ್ವಾಣ ಅಥವಾ ಮೋಕ್ಷ ಎಂದು ಕರೆಯಲ್ಪಡುವ ಸ್ವಾತಂತ್ರ್ಯದ ಸ್ಥಿತಿಯನ್ನು ತಲುಪುತ್ತಾನೆ. ಹೀಗಾಗಿ ಯೋಗದ ಗುರಿ ಸ್ವಯಂ–ಸಾಕ್ಷಾತ್ಕಾರ, 'ವಿಮೋಚನೆಯ ಸ್ಥಿತಿ' (ಮೋಕ್ಷ) ಅಥವಾ 'ಸ್ವಾತಂತ್ರ್ಯ' (ಕೈವಲ್ಯ) ಗೆ ಕಾರಣವಾಗುವ ಎಲ್ಲಾ ರೀತಿಯ ದುಃಖಗಳನ್ನು ನಿವಾರಿಸುವುದು. ಜೀವನದ ಎಲ್ಲಾ ಹಂತಗಳಲ್ಲಿ ಸ್ವಾತಂತ್ರ್ಯದಿಂದ ಬದುಕುವುದು, ಆರೋಗ್ಯ ಮತ್ತು ಸಾಮರಸ್ಯವು ಯೋಗಾಭ್ಯಾಸದ ಮುಖ್ಯ ಉದ್ದೇಶಗಳಾಗಿರಬೇಕು.

"ಯೋಗ" ವು ಮಾನವರು ಈ ಒಕ್ಕೂಟವನ್ನು ಅರಿತುಕೊಳ್ಳುವ ಮತ್ತು ತಮ್ಮ ಹಣೆಬರಹದ ಮೇಲೆ ಪಾಂಡಿತ್ಯ ಸಾಧಿಸುವ ವಿವಿಧ ವಿಧಾನಗಳನ್ನು ಒಳಗೊಂಡಿರುವ ಆಂತರಿಕ ವಿಜ್ಞಾನವನ್ನೂ ಸೂಚಿಸುತ್ತದೆ. ಯೋಗವು ಮಾನವೀಯತೆಯ ಭೌತಿಕ ಮತ್ತು ಆಧ್ಯಾತ್ಮಿಕ ಉನ್ನತಿಗೆ ಸೇವೆ ಸಲ್ಲಿಸುತ್ತಿದೆ ಎಂದು ಸಾಬೀತಾಗಿದೆ. ಮೂಲಭೂತ ಮಾನವೀಯ ಮೌಲ್ಯಗಳು ಯೋಗ ಸಾಧನದ ಗುರುತಾಗಿದೆ.

ಯೋಗದ ಮುಖ್ಯ ಗುರಿ ಮತ್ತು ಉದ್ದೇಶವೆಂದರೆ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ಸುಧಾರಿಸುವುದು. ಯೋಗವು ವ್ಯಕ್ತಿಯ ಜೀವನದ ಎಲ್ಲಾ ಅಂಶಗಳ ಮೇಲೆ ಕಾರ್ಯನಿರ್ವಹಿಸುತ್ತದೆ ಮತ್ತು ಸಮಗ್ರ ಯೋಗಕ್ಷೇಮವನ್ನು ಸಾಧಿಸಲು ಸಹಾಯ ಮಾಡುತ್ತದೆ.

**ಯೋಗದ ಗುರಿಗಳು ಮತ್ತು ಉದ್ದೇಶಗಳು:**

**ದೈಹಿಕ ಆರೋಗ್ಯ:**

ಯೋಗಾಸನಗಳು ದೈಹಿಕ ಸಾಮರ್ಥ್ಯ, ನಮ್ಯತೆ, ಸ್ನಾಯು ಬಲ, ಸಮತೋಲನ ಮತ್ತು ಸಮನ್ವಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಜೀವನಶೈಲಿ ಸಂಬಂಧಿತ ಕಾಯಿಲೆಗಳನ್ನು ತಡೆಯುತ್ತದೆ.

**ಮಾನಸಿಕ ಸ್ಪಷ್ಟತೆ:**

ಯೋಗವು ಮನಸ್ಸನ್ನು ಶಾಂತಗೊಳಿಸಲು ಮತ್ತು ಏಕಾಗ್ರತೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದು ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಮಾನಸಿಕ ಸ್ಪಷ್ಟತೆ ಮತ್ತು ಭಾವನಾತ್ಮಕ ಸ್ಥಿರತೆಯನ್ನು ಉತ್ತೇಜಿಸುತ್ತದೆ.

**ಭಾವನಾತ್ಮಕ ಸಮತೋಲನ:**

ಯೋಗವು ಭಾವನೆಗಳನ್ನು ನಿಯಂತ್ರಿಸಲು ಮತ್ತು ಭಾವನಾತ್ಮಕ ಸಮತೋಲನವನ್ನು ಸಾಧಿಸಲು ಸಹಾಯ ಮಾಡುತ್ತದೆ. ಇದು ನಕಾರಾತ್ಮಕ ಭಾವನೆಗಳನ್ನು ನಿಭಾಯಿಸಲು ಮತ್ತು ಸಕಾರಾತ್ಮಕ ಭಾವನೆಗಳನ್ನು ಬೆಳೆಸಲು ಸಹಾಯ ಮಾಡುತ್ತದೆ.

**ಆಧ್ಯಾತ್ಮಿಕ ಬೆಳವಣಿಗೆ:**

ಯೋಗವು ಆಧ್ಯಾತ್ಮಿಕ ಜಾಗೃತಿಯನ್ನು ಹೆಚ್ಚಿಸಲು ಮತ್ತು ವ್ಯಕ್ತಿಯನ್ನು ಉನ್ನತ ಪ್ರಜ್ಞೆಯೊಂದಿಗೆ ಸಂಪರ್ಕಿಸಲು ಸಹಾಯ ಮಾಡುತ್ತದೆ. ಇದು ಸ್ವಯಂ ಅರಿವು ಮತ್ತು ಅಂತಿಮ ಸತ್ಯವನ್ನು ಅರಿತುಕೊಳ್ಳಲು ಸಹಾಯ ಮಾಡುತ್ತದೆ.

**ಸಮಗ್ರ ಯೋಗಕ್ಷೇಮ:**

ಯೋಗವು ದೇಹ, ಮನಸ್ಸು ಮತ್ತು ಆತ್ಮದ ನಡುವೆ ಸಾಮರಸ್ಯವನ್ನು ಬೆಳೆಸಲು ಸಹಾಯ ಮಾಡುತ್ತದೆ. ಇದು ವ್ಯಕ್ತಿಯ ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಸಮತೋಲನ ಮತ್ತು ಯೋಗಕ್ಷೇಮವನ್ನು ಸಾಧಿಸಲು ಸಹಾಯ ಮಾಡುತ್ತದೆ.

**ಯೋಗದ ಪ್ರಮುಖ ಆರೋಗ್ಯ ಪ್ರಯೋಜನಗಳು:**

1.ದೈಹಿಕ ಸಾಮರ್ಥ್ಯ ವರ್ಧನೆ, ಒತ್ತಡದಿಂದ ಮುಕ್ತಿ ಮತ್ತು ವಿಶ್ರಾಂತಿಗೆ ಯೋಗ ಸಹಾಯ ಮಾಡುತ್ತದೆ.
2.ಸ್ನಾಯು ಬಲವನ್ನು ಸುಧಾರಿಸುತ್ತದೆ
3.ರಕ್ತ ಪರಿಚಲನೆ ಉತ್ತಮಗೊಳಿಸುತ್ತದೆ
4.ಉತ್ತಮ ನಿದ್ರೆಗೆ ಸಹಾಯ ಮಾಡುತ್ತದೆ
5.ಮೂಳೆ ಮತ್ತು ಕೀಲುಗಳ ಆರೋಗ್ಯವನ್ನು ಉತ್ತಮಗೊಳಿಸುತ್ತದೆ
6.ಹೃದಯ ಬಡಿತವನ್ನು ಉತ್ತಮಗೊಳಿಸುತ್ತದೆ
7.ಗಮನ ಮತ್ತು ಏಕಾಗ್ರತೆಗೆ ಸಹಾಯ ಮಾಡುತ್ತದೆ.

**ಈ ದಿನವನ್ನು ಜೂನ್ 21ರಂದು ಏಕೆ ಆಚರಿಸಬೇಕು?**

ವರ್ಷದ ದಕ್ಷಿಣ ಗೋಳಾರ್ಧದ ಅತಿ ಚಿಕ್ಕ ದಿನವನ್ನು ಮತ್ತು ಉತ್ತರ ಗೋಳಾರ್ಧದ ಅತಿ ಉದ್ದದ ದಿನವನ್ನು ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಆಯ್ಕೆ ಮಾಡಲಾಗಿದೆ. ಈ ದಿನವನ್ನು ಬೇಸಿಗೆ ಆಯನ ಸಂಕ್ರಾತಿ ದಿನವೆಂದು ಅಂದರೆ ವರ್ಷದಲ್ಲಿನ ಅತ್ಯಂತ ಹೆಚ್ಚು ಹಗಲುಳ್ಳ ದಿನವೆಂದು ಕರೆಯಲಾಗುತ್ತದೆ. ಯೋಗದ ದೃಷ್ಟಿಕೋನದಲ್ಲಿ ಇದು ಅತ್ಯಂತ ಹೆಚ್ಚು ಮಹತ್ವ ಪಡೆದಿದ್ದು, ಈ ದಿನ ದಕ್ಷಿಣಯಾನಕ್ಕೆ ಪರಿವರ್ತನೆ ಎಂದು ಗುರುತಿಸಲಾಗುತ್ತದೆ. ಹಾಗಾಗಿ ಯೋಗ ಆರಂಭ ಮಾಡುವವರಿಗೆ ಈ ದಿನ ಬಹಳ ಪ್ರಶಸ್ತ ಎಂದು ನಂಬಲಾಗಿದೆ.

ಆಧುನಿಕ ಜಗತ್ತಿಗೆ ಯೋಗವನ್ನು ಪರಿಚಯಿಸಿದವರು ಸ್ವಾಮಿ ವಿವೇಕಾನಂದರು. ಹಠಯೋಗವನ್ನು ಕರಗತ ಮಾಡಿಕೊಂಡಿದ್ದ ವಿವೇಕಾನಂದರು ಚಿಕಾಗೋದಲ್ಲಿ ನಡೆದ ವಿಶ್ವ ಸರ್ವಧರ್ಮ ಸಮ್ಮೇಳನದಲ್ಲಿ ಹಿಂದೂ ಸಂಸ್ಕೃತಿಯನ್ನು ಎತ್ತಿ ಹಿಡಿಯುವುದರ ಜೊತೆಗೆ ಭಾರತೀಯ ಯೋಗವನ್ನ ಜಗತ್ತಿಗೆ ಮತ್ತೊಮ್ಮೆ ಪರಿಚಯಿಸಿದರು.

ಯಾಂತ್ರಿಕ ಜಗತ್ತಿನಲ್ಲಿ ಬದುಕುತ್ತಿರುವ ಇಂದಿನ ಪೀಳಿಗೆಗೆ ಯೋಗವು ಅತ್ಯವಶ್ಯಕವಾಗಿದ್ದು, ಅದರ ಆಚರಣೆಯೊಂದಿಗೆ ಅದರ ಮಹತ್ವವನ್ನು ಅರಿತು ಸಾಗಬೇಕಾಗಿದ್ದು ನಮ್ಮೆಲ್ಲರ ಜವಾಬ್ದಾರಿ. ಜಗತ್ತಿನಲ್ಲಿರುವ ಪ್ರತಿಯೊಂದು ರೋಗಕ್ಕೂ ಯೋಗ ಮತ್ತು ಆಯುರ್ವೇದದಲ್ಲಿ ಪರಿಹಾರವಿದೆ. ವಿಜ್ಞಾನ ಜಗತ್ತಿನಲ್ಲಿ ಮುಂದುವರೆದಿರುವ ನಾವು ಅದರ ಬಗ್ಗೆ ಅಸಡ್ಡೆ ಮತ್ತು ಅಹಂ ಭಾವವನ್ನ ಹೊಂದಿದ್ದೇವೆ. ಅದೆಲ್ಲವನ್ನು ಬಿಟ್ಟು ಯೋಗವನ್ನು ಅಪ್ಪಿಕೊಳ್ಳೋಣ ಒಪ್ಪಿಕೊಳ್ಳೋಣ.

2015 ಜೂನ್ 21 ರಂದು ಯೋಗದ ಮಹತ್ವವನ್ನು ಅರಿತುಕೊಂಡ ವಿಶ್ವಸಂಸ್ಥೆಯು ಭಾರತದ ಪ್ರಸ್ತಾವನೆಯನ್ನು ಪುರಸ್ಕರಿಸಿ ಅಂತರಾಷ್ಟ್ರೀಯ ಯೋಗ ದಿನವನ್ನಾಗಿ ಘೋಷಿಸಿದೆ. ಇಂದು ಜಗತ್ತಿನ 192 ರಾಷ್ಟ್ರಗಳ ಪೈಕಿ 177 ರಾಷ್ಟ್ರಗಳು ಯೋಗವನ್ನು ಒಪ್ಪಿಕೊಂಡು ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸುತ್ತಿವೆ.

**ಎಲ್ಲರಿಗೂ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಶುಭಾಶಯಗಳು.**

# ಮೊದಲನೇ ಪುಟದಿಂದ

## ವಿವಿಧ ಕಾಮಗಾರಿಗಳ ಉದ್ಘಾಟನೆ -ಬಸನಗೌಡ ದದ್ದಲ್

ಸರಕಾರದ ಕಾರ್ಯದರ್ಶಿಗಳು, ಕಲಬುರಗಿ ಪ್ರಾದೇಶಿಕ ಆಯುಕ್ತರು, ವಿವಿಧ ಇಲಾಖೆಯ ನಿರ್ದೇಶಕರು, ರಾಯಚೂರ ಮತ್ತು ಯಾದಗಿರಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸಹ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ತಿಳಿಸಿದರು.

ಎಲ್ಲಾ ಸುವ್ಯವಸ್ಥೆ: ಕಾರ್ಯಕ್ರಮ ಮುಖ್ಯ ವೇದಿಕೆಯನ್ನು ಸಕಲ ಸೌಕರ್ಯಗಳಿಂದ ಸಿದ್ದಪಡಿಸಲಾಗಿದೆ. ವೇದಿಕೆಯ ಸುತ್ತಲು ಯಾವುದೇ ರೀತಿಯ ಗೌಜುಗದ್ದಲವಾಗದಂತೆ ಸೂಕ್ತ ಬ್ಯಾರಿಕೇಡ್ ಅಳವಡಿಕೆ, ವಾಹನಗಳ ಪಾರ್ಕಿಂಗ್, ವೇದಿಕೆಯ ಪಕ್ಕದಲ್ಲಿ ಪ್ರತ್ಯೇಕ ಸ್ಥಳದಲ್ಲಿ ಪೆಂಡಾಲ್ ಅಳವಡಿಸಿ ಊಟದ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಬಿಗಿಬಂದೋಬಸ್ತ್ ಮಾಡಲು ಬೇರೆ ಬೇರೆ ಜಿಲ್ಲೆಗಳಿಂದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಕರೆಯಿಸಿದ್ದು ಯಾವುದೇ ರೀತಿಯ ಅವಘಡಗಳು ನಡೆಯದಂತೆ ಎಲ್ಲಾ ಕಡೆಗಳಲ್ಲಿ ಖಾಕಿಪಡೆಯು ಸೂಕ್ತ ಕಣ್ಗಾವಲು ಇರಿಸಿದೆ. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ವಿಶ್ವಾಸಕ್ಕೆ ಪಡೆದು, ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕಾಗಿ ಉತ್ತಮವಾಗಿ ಸಮನ್ವಯ ಮಾಡಿದ್ದಾರೆ ಎಂದು ಶಾಸಕರು ತಿಳಿಸಿದರು.

ಬುಡಕಟ್ಟು ಸಾಂಸ್ಕೃತಿಕ ಉತ್ಸವ: ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯ ಕಾರ್ಯಕ್ರಮದ ಜೊತೆಗೆ ಬುಡಕಟ್ಟು ಸಾಂಸ್ಕೃತಿಕ

ಉತ್ಸವ ಕಾರ್ಯಕ್ರಮ ಕೂಡ ನೆರವೇರಲಿದೆ. ಬೇರೆ ಬೇರೆ ಜಿಲ್ಲೆಗಳಿಂದ ಬುಡಕಟ್ಟು ಸಮುದಾಯದ ಕಲಾ ತಂಡಗಳು ರಾಯಚೂರಿಗೆ ಬಂದಿವೆ. ವೇದಿಕೆಯ ಎದುರುಗಡೆ ಇರುವ ಸ್ಥಳದಲ್ಲಿ ಬುಡಕಟ್ಟು ಉತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗುವ ವಿವಿಧ ಬುಡಕಟ್ಟು ತಂಡಗಳಿಗೆ ಮತ್ತು ಸರ್ಕಾರದ ವಿವಿಧ ಯೋಜನೆಗಳ ಪ್ರಚಾರಾರ್ಥ ವಿವಿಧ ಇಲಾಖೆಗಳಿಂದ ಮಳಿಗೆಯನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ. ಬುಡಕಟ್ಟು ಸಮುದಾಯಗಳ ಆಚಾರ ವಿಚಾರದ ಬಗ್ಗೆ ತಿಳಿಯಲು ಮತ್ತು ಸರ್ಕಾರದ ವಿವಿಧ ಕಾರ್ಯಕ್ರಮಗಳ ಬಗ್ಗೆ ಅರಿಯಲು ಈ ಕಾರ್ಯಕ್ರಮದಿಂದ ಸಹಕಾರಿಯಾಗಲಿದೆ ಎಂದು ಶಾಸಕರು ತಿಳಿಸಿದರು.

ವಿಶ್ವವಿದ್ಯಾಲಯದಲ್ಲಿ ಕಾರ್ಯಕ್ರಮ: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನ ಮತ್ತು ಕಂಚಿನ ಪುತ್ಥಳಿ ಹಾಗೂ ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಯ ಶಂಕುಸ್ಥಾಪನೆ ಸಮಾರಂಭದ ಉದ್ಘಾಟನೆಯನ್ನು ಸಹ ಮಾನ್ಯ ಮುಖ್ಯಮಂತ್ರಿಗಳು ಜೂನ್ 23ರಂದು ಬೆಳಗ್ಗೆ 11 ಗಂಟೆಗೆ ಆದಿಕವಿ

ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರು ಆವರಣದಲ್ಲಿ ನರವೇರಿಸಲಿದ್ದಾರೆ. ಇದಕ್ಕಾಗಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಸಜ ಹಬ್ಬದ ಸಂಭ್ರಮ ಕಾಣುತ್ತಿದೆ. ರಾಯಚೂರಲ್ಲಿರುವ ವಿಶ್ವವಿದ್ಯಾಲಯದ ಮರುನಾಮಕರಣ ಸೇರಿದಂತೆ ವಿಶ್ವವಿದ್ಯಾಲಯದ ಆವರಣದಲ್ಲಿ ಚಾಲನೆ ಸಿಗುವ ಅಭಿವೃದ್ಧಿ ಕಾರ್ಯಗಳಿಂದಾಗಿ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಹ ರಾಯಚೂರು ಹೆಸರು ಜಾಗತಿಕವಾಗಿ ಚಿರಪರಿಚಿತವಾಗಲಿದೆ ಎಂದು ಶಾಸಕರು ತಿಳಿಸಿದರು.

ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ: ನಮ್ಮ ಹಿರಿಯರ ಪರಿಶ್ರಮದಿಂದಾಗಿ 371(ಜೆ) ವಿಶೇಷ ಸ್ಥಾನಮಾನ ರಾಯಚೂರ ಸೇರಿದಂತೆ ಕಲ್ಯಾಣ ಭಾಗದ ಎಲ್ಲ ಜಿಲ್ಲೆಗಳಿಗೆ ಲಭ್ಯವಾಗಿದ್ದರಿಂದಾಗಿ ನಮಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲು ಸೌಕರ್ಯ ದೊರೆತು ಉದ್ಯೋಗವಕಾಶ ಸಿಗುವಂತಾಗಿದೆ. ಕೆಕೆಆರ್‌ಡಿಬಿಯಿಂದಾಗಿ ವಿಶೇಷ ಅನುದಾನವು ಸಹ ನಮ್ಮ ಭಾಗಕ್ಕೆ ಲಭ್ಯವಾಗಿ ಈ ಭಾಗದಲ್ಲಿ ನಾನಾ ಅಭಿವೃದ್ದಿ ಕಾರ್ಯಗಳು ನಡೆಯುವಂತಾಗಿದೆ. ಹೀಗಾಗಿ ಸಂವಿಧಾನ ಅನುಚ್ಛೇದ 371 (ಜೆ) ದಶಮಾನೋತ್ಸವ ನೆನಪಿನ ವಿಶೇಷ ಪುಸ್ತಕದ ಬಿಡುಗಡೆಯು ನಡೆಯಲಿದೆ. ರಾಯಚೂರು ತಾಲೂಕಿನ ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಹತ್ತಿರ ಜೂನ್ 23ರ ಬೆಳಿಗ್ಗೆ 11 ಗಂಟೆಗೆ ನಡೆಯುವ ಕಾರ್ಯಕ್ರಮಕ್ಕೆ ರಾಯಚೂರ ಸೇರಿದಂತೆ ಯಾದಗಿರಿ, ಕಲಬುರಗಿ, ಬೀದರ, ಬಳ್ಳಾರಿ, ಕೊಪ್ಪಳ, ವಿಜಯನಗರ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಗೊಳಿಸಬೇಕು ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಇದೆ ಸಂದರ್ಭದಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ ಪಾಟೀಲ ಇಟಗಿ, ಮಲ್ಲಿಕಾರ್ಜುನಗೌಡ ತಲಮಾರಿ, ರಜಾಕ್ ಉಸ್ತಾದ್, ಅಸ್ಲಂ ಪಾಶಾ ಸೇರಿದಂತೆ ಇನ್ನೀತರರು ಇದ್ದರು.

# ಜೂ.27 ರಂದು ಮಾಜಿ ಪ್ರಧಾನಿ ದೇವೇಗೌಡರ ಪುತ್ಥಳಿ ಅನಾವರಣ, ಬಹಿರಂಗ ಸಭೆ – ವಿರೂಪಾಕ್ಷಿ

ಜನವಾದಿ ವಾರ್ತೆ

ರಾಯಚೂರು ಜೂ 22 – ದೇವದುರ್ಗ ತಾಲೂಕಿನ ಚಿಕ್ಕಹೊನ್ನಕುಣಿಯಲ್ಲಿ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರ ಪುತ್ಥಳಿ ಅನಾವರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜೆಡಿ–ಎಸ್ ಜಿಲ್ಲಾಧ್ಯಕ್ಷ ಎಂ. ವಿರುಪಾಕ್ಷಿ ತಿಳಿಸಿದರು.




ಅವರಿಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದವರು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾದ ಎಚ್ .ಡಿ ದೇವೇಗೌಡರವರು ಜೆಡಿಎಸ್ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರಬೇಕೆಂದು ತಮ್ಮ ಮನದ ಹಿಂಗಿತವನ್ನು ಹೊರಹಾಕಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಯುವಮುಖಂಡರಾದ ನಿಖಿಲ್ ಕುಮಾರಸ್ವಾಮಿಯವರು ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಪಕ್ಷವನ್ನು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ಜೂನ್ 26ರಂದು ಸಿಂಧನೂರಿನಲ್ಲಿ ಮುಂಜಾನೆ ಮಾನ್ವಿಯಲ್ಲಿ ಮಧ್ಯಾಹ್ನ ಕಾರ್ಯಕ್ರಮವನ್ನು ಮುಗಿಸಿಕೊಂಡು ಸಂಜೆ ರಾಯಚೂರಿನಲ್ಲಿ ವಾಸ್ತವ ಹೂಡಲಿದ್ದಾರೆ.

ಜೂನ್ 27ರಂದು ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಚಿಕ್ಕಹೊನ್ನಕುಣಿ ಗ್ರಾಮದಲ್ಲಿ ಜೆಡಿಎಸ್ ಪಕ್ಷದ ಮುಖಂಡರೊಬ್ಬರು ತಮ್ಮ ವೈಯಕ್ತಿಕ ಹಣದಲ್ಲಿ ಮಾಜಿ ಪ್ರಧಾನಿ ಎಚ್. ಡಿ ದೇವೇಗೌಡರ ಪುತ್ಥಳಿಯನ್ನು ನಿರ್ಮಿಸಿದ್ದು ಅದರ ಅನಾವರಣವನ್ನ ಸ್ವತಃ ದೇವೇಗೌಡರೇ ಮಾಡಲಿದ್ದು ನಂತರ ದೇವದುರ್ಗದ ಬಸವೇಶ್ವರ ಮೈದಾನದಲ್ಲಿ ಬಹಿರಂಗ ಸಭೆಯನ್ನು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದರು.

ಚಿಕ್ಕಹೊಣಕುಣಿಯ ಸಿದ್ದನಗೌಡ ಅವರು ಈ ಪುತ್ತಳಿ ಸ್ವಂತ ಹಣದಿಂದಲೇ ಪುತ್ಥಳಿಯನ್ನು ನಿರ್ಮಾಣ ಮಾಡಿದ್ದು, ಆ ಜಾಗದ ದಾನಿಗಳಿಗೂ ಸಹ ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು ಆದ್ದರಿಂದ ಜಿಲ್ಲೆಯ ಎಲ್ಲಾ ಜೆಡಿಎಸ್ ತಾಲೂಕ ಅಧ್ಯಕ್ಷರು, ಪದಾಧಿಕಾ–ರಿಗಳು ಜೆಡಿಎಸ್ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ ಮಾತನಾಡಿ, ಜೂನ್ 27ರಂದು ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಚಿಕ್ಕಹೊನ್ನಕುಣಿ ಗ್ರಾಮದಲ್ಲಿ ನಿರ್ಮಾಣವಾಗಿರುವ ಮಾಜಿ ಪ್ರಧಾನಿ ಎಚ್. ಡಿ ದೇವೇಗೌಡರ ಪುತ್ಥಳಿ ಅನಾವರಣ ಮಾಡಲಾಗುತ್ತದೆ ಅನಾವರಣಕ್ಕೆ ಸ್ವತಃ ದೇವೇಗೌಡರು ಆಗಮಿಸಲಿದ್ದಾರೆ ಎಂದವರು, ಕಾಂಗ್ರೆಸ್ ಸರ್ಕಾರ ಯಾವುದೇ ದೇವದುರ್ಗ ಕ್ಷೇತ್ರಕ್ಕೆ ಯಾವುದೇ ಅನುದಾನ ನೀಡದೆ ಮಲತಾಯಿ ಧೋರಣೆಯನ್ನು ಅನುಸರಿಸುತ್ತಿದೆ. ಕ್ಷೇತ್ರಕ್ಕೆ ಕಲ್ಯಾಣ ಕರ್ನಾಟಕ ಅನುದಾನ ಬಿಟ್ಟರೆ ಬೇರೆ ಯಾವುದೇ ಅನುದಾನ ನೀಡುತ್ತಿಲ್ಲ. ಎಲ್ಲಾ ಅನುದಾನವನ್ನು ಗ್ಯಾರೆಂಟಿಗಳಿಗೆ ನೀಡುಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಕಾಂಗ್ರೆಸ್ ಸರ್ಕಾರ ಶಾಸಕರ ಹಕ್ಕುಗಳನ್ನು ಸಂಪೂರ್ಣ ಕಸಿದುಕೊಂಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶಾಸಕಿ ಜೆಡಿ–ಎಸ್ ಮುಖಂಡರಾದ ಮಹಾಂತೇಶ ಪಾಟೀಲ್ ಅತ್ತನೂರು, ಸಣ್ಣ ನರಸಿಂಹ ನಾಯಕ, ಎನ್. ಶಿವಶಂಕರ್, ತಿಮ್ಮಾರೆಡ್ಡಿ, ಸಿದ್ದನಗೌಡ, ಲಕ್ಷ್ಮೀಪತಿ ಗಾಣಧಾಳ್, ಮಲ್ಲನಗೌಡ ಸಾಹುಕಾರ, ನರಸಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ತಾಲೂಕ ಆಡಳಿತದಿಂದ ಪಿಂಚಣಿ ಅದಾಲತ್ ಕಾರ್ಯಕ್ರಮ



ಜನವಾದಿ ವಾರ್ತೆ

ಕವಿತಾಳ ಜೂ 22– ಸಮೀಪದ ಹೀರಾ ಗ್ರಾಮದಲ್ಲಿ ಸರ್ಕಾರದ ಆದೇಶದಂತೆ ಪ್ರತಿ ತಿಂಗಳ ಮೂರನೇ ಶನಿವಾರದಂದು ತಾಲೂಕ ಆಡಳಿತ ವತಿಯಿಂದ ಪಿಂಚಣಿ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಉಪ ತಹಸೀಲ್ದಾರ್ ಮಂಜುನಾಥ್ ಸರ್ಕಾರದ ವತಿಯಿಂದ ಸಂಧ್ಯಾಕಾಲದಲ್ಲಿ ಹಿರಿಯ ನಾಗರಿಕರು, ಅಂಗವಿಕಲರು,ವಿಧವಾ ಮಹಿಳೆಯರು, ವಯೋವೃದ್ಧರು ಸಮಾಜದಲ್ಲಿ ಗೌರವಯುತವಾಗಿ ಬದುಕಲು ಸರ್ಕಾರದ ವತಿಯಿಂದ ವಿವಿಧ ಮಾಶಾಸನಗಳ ಸೌಲಭ್ಯವನ್ನು ಒದಗಿಸಿದೆ. ಅರ್ಹ ಫಲನುಭವಿಗಳು ಸೂಕ್ತ ದಾಖಲಾತಿ ಸಲ್ಲಿಸಿ ಯೋಜನೆಗಳ ಸದುಪಯೋಗ ಪಡೆಯಬೇಕೆಂದು ಹೇಳಿದರು.

ಮತ್ತು ಈಗಾಗಲೇ ಮಾಶಾಸನ ಆದೇಶ ಹೊಂದಿದವರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಕೊಂಡು ಮರುಚಾಲನೆ ಮಾಡಿಕೊಳ್ಳಲು ಸೂಚಿಸಿದರು. ಈ ಕಾರ್ಯಕ್ರಮದಲ್ಲಿ ಐದು ಜನ ಫಲನುಭವಿಗಳಿಗೆ ಸ್ಥಳದಲ್ಲಿಯೇ ಆದೇಶ ಪ್ರತಿಗಳನ್ನು ವಿತರಿಸಲಾಯಿತು.

ಈ ಸಂಧರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿ ಸದಾಕಲಿ, ಸಿಬ್ಬಂದಿ ವಿಜಯಲಕ್ಷ್ಮಿ, ಹೀರಾ ಗ್ರಾಮದ ಹಂಪಯ್ಯ ಮೇಟಿ, ಅಮರೇಶ್, ಬಸವರಾಜ ದೊಡ್ಡಮನಿ, ಆದಪ್ಪ, ಗವಿಯಪ್ಪ, ಅಶೋಕ್ ನಾಯಕ ಸೇರಿದಂತೆ ಇತರರಿದ್ದರು.

ಜನವಾದಿ
ಜಾಹೀರಾತಿಗಾಗಿ ಸಂಪರ್ಕಿಸಿ:
9448300139

# ನೆಲ ಬಾಡಿಗೆ ಹರಾಜು ಪ್ರಕ್ರಿಯೆ



ಜನವಾದಿ ವಾರ್ತೆ

ಮುದಗಲ್ ಜೂ 22– ಪುರಸಭೆ ಸಭಾಂಗಣದಲ್ಲಿ ಮೊಹರಂ ಹಬ್ಬದ ನಿಮಿತ್ತ ಚೌಡಿ ಕಟ್ಟಿ ಹತ್ತಿರವಿರುವ ನೆಲಬಾಡಿಗೆ, ಜೋಕಾಲಿ ಹರಾಜು ಪ್ರಕ್ರಿಯೆ ಜರುಗಿತು.

2025–26 ಸಾಲಿನ ಮೊಹರಂ ಹಬ್ಬದ ಸಾರ್ವಜನಿಕ ಹರಾಜು ಪ್ರಕ್ರಿಯೆಯಲ್ಲಿ ನೆಲ ಬಾಡಿಗೆ ವಸೂಲಾತಿ ಶುಲ್ಕ 1,93,300 ನಿಗದಿಪಡಿಸಲಾಗಿತ್ತು. ಬಿಡ್‌ದಾರರು ರೂ. 17 ಹರಾಜಿನಲ್ಲಿ ಭಾಗವಹಿಸಿದ್ದರು. ಹರಾಜು ಪ್ರಕ್ರಿಯೆಯಲ್ಲಿ ಮುರ್ತುಜಸಾಬ ಎಂಬುವರಿಗೆ 4 ಲಕ್ಷ 26 ರೂ. ಗಳಿಗೆ ನೆಲ ಬಾಡಿಗೆ ಹರಾಜು ಮಾಡಲಾಯಿತು.

ಪುರಸಭೆ ನಿಯಮದಂತೆ ಜೋಕಾಲಿ ಠೇವಣಿ 16,56,600 ಇದ್ದು, ಜೋಕಾಲಿ ಹರಾಜಿನಲ್ಲಿ ಒಬ್ಬರೇ ಭಾಗವಹಿಸಿದ್ದರು. ದಾಖಲಾತಿಗಳು ಸರಿಯಿಲ್ಲದ ಕಾರಣ ಅಧಿಕಾರಿಗಳು ಹರಾಜುದಾರರನ್ನು ಪರಿಗಣಿಸಿಲ್ಲ ಎಂದು ಮುಖ್ಯಾಧಿಕಾರಿ ಪ್ರವೀಣ ಬೋಗಾರ ತಿಳಿಸಿದರು. ಪುರಸಭೆ ಉಪಾಧ್ಯಕ್ಷ ಅಜಮೀರ್ ಬೆಳ್ಳಿಕಟ್, ಬಿಜೆಪಿ ಅಧ್ಯಕ್ಷ ಕರಿಯಪ್ಪ ಯಾದವ, ಕಾಂಗ್ರೆಸ್ ಪಕ್ಷದ ಯುವ ಘಟಕ ಅಧ್ಯಕ್ಷ ಮಹಮ್ಮದ ಖದೀರ,ಸದಸ್ಯರಾದ ಮೂಬೂಬ್ ಕಡಪುಡಿಬಾಬು ಉಪ್ಪಾರ, ದುರುಗಪ್ಪ ಕಟ್ಟಿಮನಿ, ತಸ್ಲಿಂ ಮುಲಾ, ಸೇರಿದಂತೆ ಪುರಸಭೆ ಸಿಬ್ಬಂದಿಗಳು ಇದ್ದರು.

### ಕುಕನೂರು– ಧೀಮಂತ ನಾಯಕ, ಮಾಜಿಮಂತ್ರಿ ದಿ. ಕೆ. ಹೆಚ್ ಪಾಟೀಲ್ ಮೂರ್ತಿ ಅನಾವರಣ

# ಕೆ. ಹೆಚ್ ಪಾಟೀಲ್ ನಮ್ಮೆಲ್ಲರಿಗೆ ಸ್ಪೂರ್ತಿ– ಎನ್‌ಎಸ್ ಬೋಸರಾಜು

ಜನವಾದಿ ವಾರ್ತೆ

ಕೊಪ್ಪಳ ಜೂ 22– ಮಾಜಿ ಮಂತ್ರಿ ದಿ. ಕೆಎಚ್ ಪಾಟೀಲ್ ಅವರು ತಮ್ಮ ಜೀವನದುದ್ದಕ್ಕೂ ರೈತರ ಏಳಿಗೆಗಾಗಿ ಶ್ರಮಿಸಿದ್ದಾರೆ. ರಾಜಕಾರಣದಲ್ಲಿ ಸತ್ಯವನ್ನು ಹೇಳುವ ಮೂಲಕ ನೇರ ಮತ್ತು ನಿಷ್ಠುರವಾಗಿ ಮಾತನಾಡುತ್ತಿದ್ದರು. ಈಗಿರುವ ರಾಜಕಾರಣಿಗಳಿಗೆ ಅವರು ಸ್ಪೂರ್ತಿದಾಯಕವಾಗಿದ್ದಾರೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಅವರು ತಿಳಿಸಿದರು.



ಕೊಪ್ಪಳ ಜಿಲ್ಲೆಯ ಕೂಕನೂರು ಗ್ರಾಮದಲ್ಲಿ ಕರ್ನಾಟಕ ನೀರಾವರಿ ನಿಗಮ ನಿಯಮಿತ ವತಿಯಿಂದ ಮಾಜಿ ಸಚಿವರು ಧೀಮಂತ ನಾಯಕರಾದ ಡಿ ಕೆ ಪಾಟೀಲ್ ಅವರ ಪುತ್ತಳಿ ಅನಾವರಣ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ನ ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಗೃಹ ಸಚಿವರಾದ ಜಿ ಪರಮೇಶ್ವರ್ ಮುಖ್ಯ ಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ್ ರಾಯರೆಡ್ಡಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್ ವಿ ದೇಶಪಾಂಡೆ ಹಿಂದುಳಿದ ವರ್ಗದ ಸಚಿವರಾದ ಶಿವರಾಜ್ ತಂಗಡಿಗಿ ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್ ಕೆ ಪಾಟೀಲ್ ಅವರೊಂದಿಗೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಅವರು ಭಾಗವಹಿಸಿ ಧೀಮಂತ ನಾಯಕರಾದ ದಿ.ಕೆಎಚ್ ಪಾಟೀಲ್ ಅವರ ಪುತ್ಥಳಿಯನ್ನು ಅನಾವರಣಗೊಳಿಸಿದರು.

ದಿ. ಕೆಎಚ್ ಪಾಟೀಲ್ ಅವರನ್ನು ಕೇವಲ ಮೂರ್ತಿಯಾಗಿ ಕಂಡರೆ ಸಾಲದು ನಾವೆಲ್ಲರೂ ಹಾಗೂ ಯುವ ಪೀಳಿಗೆ ಅವರನ್ನು ಪ್ರೂರ್ತಿಯಾಗಿ ತೆಗೆದುಕೊಂಡು ಅವರ ಹಾದಿಯಲ್ಲಿ ಸಾಗಬೇಕು. ಸಹಕಾರ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಅಗಣಿತವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ರಾಯಚೂರಿನಲ್ಲಿ ದಿನಾಂಕ 21 ರಂದು ನಡೆದ ಎನ್ ಎಸ್ ಬೋಸುರಾಜು ಅವರ ಅಭಿನಂದನ ಹಾಗೂ ಚೈತನ್ಯಸಾಗರ ಗ್ರಂಥ ಲೋಕಾರ್ಪಣೆ ನಿಮಿತ್ಯ ಸಭಾಪತಿ ಬಸವರಾಜ್ ಹೊರಟ್ಟಿ, ಬಸವರಾಜ ರಾಯರೆಡ್ಡಿ, ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ಸಚಿವ ಎನ್‌ಎಸ್ ಬೋಸರಾಜು ಅವರಿಗೆ ಸಿಹಿ ತಿನಿಸುವ ಮೂಲಕ ಶುಭ ಕೋರಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವರು ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಅಮರೇಗೌಡ ಪಾಟೀಲ್ ಬಯ್ಯಾಪುರ್, ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ರಾಜಶೇಖರ್ ಹಿಟ್ನಾಳ್, ಮಾಜಿ ಸಂಸದರಾದ ಸಂಕಣ್ಣ ಕರಡಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಅನೇಕ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ, ಉದ್ಯಾನವನ, ಕಂಚಿನ ಪುತ್ಥಳಿ, ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಯ ಶಂಕುಸ್ಥಾಪನೆ ಇಂದು

ಜನವಾದಿ ವಾರ್ತೆ

ರಾಯಚೂರು ಜೂ 22 – ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನ ಮತ್ತು ಕಂಚಿನ ಪುತ್ಥಳಿ ಹಾಗೂ ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಯ ಶಂಕುಸ್ಥಾಪನೆ ಸಮಾರಂಭವು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರು ಆವರಣದಲ್ಲಿ ಜೂನ್ 23ರ ಬೆಳಿಗ್ಗೆ 11 ಗಂಟೆಗೆ ನಡೆಯಲಿದೆ.

ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಉದ್ಘಾಟಿಸುವರು. ರಾಜ್ಯಸಭೆಯ ಸದಸ್ಯರು ಹಾಗೂ ವಿರೋಧ ಪಕ್ಷದ ನಾಯಕರಾದ ಡಾ.ಮಲ್ಲಿಕಾರ್ಜುನ ಎಂ.ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಗೌರವ ಉಪಸ್ಥಿತಿ ವಹಿಸುವರು.

ಮುಖ್ಯ ಅತಿಥಿಗಳಾಗಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಗೃಹ ಇಲಾಖೆ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಜಿ.ಪರಮೇಶರ, ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ, ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರು ಹಾಗೂ ವಿಜಯನಗರ ಮತ್ತು ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ. ಜೆಡ್. ಜಮೀರ್ ಅಹ್ಮದ್ ಖಾನ್, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಎಸ್. ಭೋಸರಾಜು, ಉನ್ನತ ಶಿಕ್ಷಣ ಇಲಾಖೆ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ. ಸುಧಾಕರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡುರಾವ್, ಲೋಕೋಪಯೋಗಿ ಇಲಾಖೆ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಇಲಾಖೆ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಸಂಗಪ್ಪ ತಂಗಡಗಿ, ನಗರಾಭಿವೃದ್ಧಿ ಇಲಾಖೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಸುರೇಶ ಬಿ. ಎಸ್., ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಉಪಸ್ಥಿತರಿರುವರು.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಡಾ.ಅಜಯ್ ಧರ್ಮಸಿಂಗ್ ಅವರು ಗೌರವಾನ್ವಿತ ಉಪಸ್ಥಿತಿ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸದಸ್ಯರಾದ ಕೆ.ರಾಜಶೇಖರ ಹಿಟ್ನಾಳ ಹಾಗೂ ಕಲಬುರಗಿ ಲೋಕಸಭಾ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ ಅವರು ಗೌರವಾನ್ವಿತ ಅತಿಥಿಗಳಾಗಿ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ಯಾದಗಿರಿ ಶಾಸಕರಾದ ಚೆನ್ನಾರೆಡ್ಡಿ ಪಾಟೀಲ ತನ್ನೂರ, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ಗುರುಮಿಠಕಲ್ ಶಾಸಕರಾದ ಶರಣಗೌಡ ಕಂದಕೂರ, ಶೋರಾಪೂರ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ. ನಮೋಷಿ, ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ್, ಶರಣಗೌಡ ಅ. ಪಾಟೀಲ್ ಬಯ್ಯಾಪೂರ, ಎ. ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲ್ಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಯರಗೇರಾ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಮಹಾದೇವಿ ಗಂ. ಭೀಮೇಶ ನಾಯಕ್ ಅವರು ಗೌರವಾನ್ವಿತ ಆಹ್ವಾನಿತರಾಗಿ ಉಪಸ್ಥಿತಿ ವಹಿಸುವರು.

ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ಉಮಾ ಮಹಾದೇವನ್, ಜಲಸಂಪನ್ಮೂಲ ಇಲಾಖೆಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತ, ಆರ್ಥಿಕ ಇಲಾಖೆಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ್ ಕುಮಾರ್ ಸಿಂಗ್, ಉನ್ನತ ಶಿಕ್ಷಣ ಇಲಾಖೆಯ ಸರಕಾರದ ಕಾರ್ಯದರ್ಶಿಗಳಾದ ಕೆ.ಜಿ.ಜಗದೀಶ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸರಕಾರದ ಕಾರ್ಯದರ್ಶಿಗಳಾದ ರಂದೀಪ್ ಡಿ., ಕಲಬುರಗಿ ಪ್ರಾದೇಶಿಕ ಆಯುಕ್ತರಾದ ಕೃಷ್ಣಭಾಜಪೇಯಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಯೋಗೇಶ್ ಕೆ., ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಕೆ. ಆರ್. ರಾಜಕುಮಾರ, ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಯಾದಗಿರಿ ಜಿಲ್ಲಾಧಿಕಾರಿಗಳಾದ ಸುಶೀಲಾ ಬಿ, ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಲವೀಶ್ ಒರಡಿಯಾ, ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ. ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪೃಥ್ವಿಕ್ ಶಂಕರ್, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಸುಯಯೀಂದ್ರ ಕುಲಕರ್ಣಿ, ಕುಲಸಚಿವ ಡಾ.ಚನ್ನಪ್ಪ ಎ., ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗುವರು ಎಂದು ವಿವಿಯ ಪ್ರಕಟಣೆ ತಿಳಿಸಿದೆ.

Printed by , Published by, Owned by : basavaraj H , Printed and Published at Basavashree Printers and Publishers, H.No.1-11-54/32, Prashanth Colony, RAICHUR-584101. Editor. BASAVARAJ H